ಸಂಪುಟ : 11 ಸಂಚಿಕೆ: 64 ಪುಟ : 4+2 ಬೆಲೆ: 3.00 ಗುರುವಾರ ಎಪ್ರಿಲ್ 09 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 64 Pages : 4+2 Price : 3.00 Thursday April 09 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಅಲ್ಪಸಂಖ್ಯಾತರ ಯೋಜನೆಗಳ ಸಮಗ್ರ ಪರಿಶೀಲನೆ-ಶಿಕ್ಷಣ, ಆರೋಗ್ಯ, ಸೌಲಭ್ಯಗಳ ಸಮರ್ಪಕ ಜಾರಿಗೆ ಅಧಿಕಾರಿಗಳಿಗೆ ನಿಸಾರ್ ಅಹಮದ್ ಸೂಚನೆ

# ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗಬಾರದು



**■ ವಿಜಯಸಾಕ್ಷಿ ಸುದ್ದಿ, ಗದಗ**

ಅಂಗನವಾಡಿಯಿಂದ ಶಾಲೆಯವರೆಗೆ ಪ್ರತಿಯೊಂದು ಮಗು ನಿರಂತರವಾಗಿ ಶಿಕ್ಷಣ ಪಡೆಯುವಂತೆ ನೋಡಿಕೊಳ್ಳಬೇಕು. ಯಾವುದೇ ಮಗು ಶಿಕ್ಷಣ, ಆರೋಗ್ಯ ಹಾಗೂ ಸರ್ಕಾರದ ಸೌಲಭ್ಯಗಳಿಂದ ವಂಚಿತವಾಗಬಾರದು ಎಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮದ್ ಹೇಳಿದರು.

ಜಿಲ್ಲಾಡಳಿತ ಭವನದಲ್ಲಿ ಪ್ರಧಾನ ಮಂತ್ರಿ 15 ಅಂಶಗಳ ಕಾರ್ಯಕ್ರಮಕ್ಕೆ ಸಂಬಂಧಿಸಿದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಜಾರಿಗೊಂಡಿರುವ ಯೋಜನೆಗಳು ಕೇವಲ ಕಾಗದದಲ್ಲೇ ಉಳಿಯದೆ ತಳಮಟ್ಟದಲ್ಲಿ ಪರಿಣಾಮಕಾರಿಯಾಗಿ ಜಾರಿಯಾಗಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಂಗನವಾಡಿ ಕೇಂದ್ರಗಳಲ್ಲಿ ಪೂರ್ವಪ್ರಾಥಮಿಕ ಶಿಕ್ಷಣ ಪಡೆದ ಪ್ರತಿಯೊಂದು ಮಗು ಸರ್ಕಾರಿ ಅಥವಾ ಖಾಸಗಿ ಶಾಲೆಗಳ ಮೊದಲನೇ ತರಗತಿಗೆ ಸೇರ್ಪಡೆಯಾಗಿರುವುದನ್ನು ಸಂಬಂಧಿತ ಇಲಾಖೆ ಖಚಿತಪಡಿಸಿಕೊಳ್ಳಬೇಕು. ವಿಶೇಷವಾಗಿ ಅಲ್ಪಸಂಖ್ಯಾತ ಸಮುದಾಯದ ಮಕ್ಕಳು ಶಿಕ್ಷಣದಿಂದ ದೂರವಾಗದಂತೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು. ಶಾಲಾ ಶಿಕ್ಷಣ, ಪೌಷ್ಠಿಕ ಆಹಾರ, ವಿದ್ಯಾರ್ಥಿ ವೇತನ, ಆರೋಗ್ಯ ಸೇವೆಗಳು ಸೇರಿದಂತೆ ಸರ್ಕಾರದ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವಂತೆ ಕ್ರಮ ಕೈಗೊಳ್ಳಬೇಕು. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಅರಿತು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು. ಅರ್ಹ ಫಲಾನುಭವಿಗಳು ಯಾವುದೇ ಕಾರಣಕ್ಕೂ ಸೌಲಭ್ಯಗಳಿಂದ ವಂಚಿತರಾಗಬಾರದು ಎಂದು ಅವರು ಎಚ್ಚರಿಸಿದರು. ಗದಗ ಜಿಲ್ಲೆಯ ಕೋಮು ಸೌಹಾರ್ದತೆಯನ್ನು ಮೆಚ್ಚಿದ ಅವರು, ಸಮಾಜದಲ್ಲಿ ಶಾಂತಿ ಕಾಪಾಡುವಲ್ಲಿ ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

> ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ವರದಿಗಳನ್ನು ಪರಿಶೀಲಿಸಲಾಯಿತು. ಶಾಲಾ ಶಿಕ್ಷಣ ಇಲಾಖೆಯಿಂದ ಸಮವಸ್ತ್ರ, ಶೂ ಮತ್ತು ಸಾಕ್ಸ್ ಯೋಜನೆಯಡಿ 14,794 ಫಲಾನುಭವಿಗಳು ಹಾಗೂ ಅಕ್ಷರ ದಾಸೋಹ ಮತ್ತು ಕ್ಷೀರ ಭಾಗ್ಯ ಯೋಜನೆಯಡಿ 19,128 ಫಲಾನುಭವಿಗಳು ಸೌಲಭ್ಯ ಪಡೆದಿದ್ದಾರೆ.

ಕೊಳಗೇರಿ ಅಭಿವೃದ್ಧಿ ನಿಗಮದಿಂದ ನಿರ್ಮಿಸಿದ ಮನೆಗಳ ಮಾಹಿತಿ, ಕಾರ್ಮಿಕ ಇಲಾಖೆಯಲ್ಲಿ ನೋಂದಾಯಿತ ಕಾರ್ಮಿಕರಿಗೆ ನೀಡಿರುವ ಸೌಲಭ್ಯಗಳ ವಿವರಗಳನ್ನು ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಆರೋಗ್ಯ ಇಲಾಖೆಯಿಂದ ಕೈಗೊಂಡ ಕ್ರಮಗಳ ಕುರಿತು ಮಾಹಿತಿ ಪಡೆದ ಅವರು, ಕೌಶಲ್ಯಾಭಿವೃದ್ಧಿ ಇಲಾಖೆಯಿಂದ ಹೆಚ್ಚಿನ ಫಲಾನುಭವಿಗಳಿಗೆ ಅನುಕೂಲವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದರು. ಜರ್ಮನಿ ಸೇರಿದಂತೆ ವಿದೇಶಗಳಲ್ಲಿ ಉದ್ಯೋಗ ಅವಕಾಶಗಳಿಗೆ ತರಬೇತಿ ನೀಡಿ ಕಳುಹಿಸುವಂತೆ ಸೂಚಿಸಿದರು.


ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯಿಂದ ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ 5,187 ಲಕ್ಷ ವೆಚ್ಚದಲ್ಲಿ 798 ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಲಾಗಿದೆ. ಉದ್ಯೋಗ ಮೇಳದ ಮೂಲಕ 8 ಅಲ್ಪಸಂಖ್ಯಾತರಿಗೆ ಉದ್ಯೋಗ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಲಾಯಿತು.

> "ಯಾವುದೇ ಮಗು ಶಿಕ್ಷಣ, ಆರೋಗ್ಯ ಹಾಗೂ ಸರ್ಕಾರದ ಸೌಲಭ್ಯಗಳಿಂದ ವಂಚಿತವಾಗಬಾರದು; ಯೋಜನೆಗಳು ನೆಲಮಟ್ಟದಲ್ಲಿ ಪರಿಣಾಮಕಾರಿಯಾಗಿ ಜಾರಿಯಾಗಬೇಕು."
>
> – **ಯು. ನಿಸಾರ್ ಅಹಮದ್,** ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ

> "ಶಾಲೆ, ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳಲ್ಲಿ ಕರಿಯರ್ ಗೈಡನ್ಸ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಅರ್ಹ ಅಲ್ಪಸಂಖ್ಯಾತ ಫಲಾನುಭವಿಗಳಿಗೆ ವಿವಿಧ ಇಲಾಖೆಗಳ ಸೌಲಭ್ಯಗಳನ್ನು ವಿಳಂಬವಿಲ್ಲದೆ ಒದಗಿಸಬೇಕು."
>
> – **ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ., ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರುಡಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಓಎಸ್‌ಡಿ ಮುಜಾಬುಲ್ಲಾ ಜಾಫರಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಾಲೇಹೊಸೂರಿನಲ್ಲಿ ಜಾತ್ರಾ ಸಂಭ್ರಮ: ಕಳೆಗಟ್ಟಿದ ಜೋಡಿ ರಥೋತ್ಸವ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಬಾಲೇಹೊಸೂರಿನ ಶ್ರೀ ದಿಂಗಾಲೇಶ್ವರ ಮಠ ಹಾಗೂ ಗ್ರಾಮದ ಆಂಜನೇಯ ಸ್ವಾಮಿ ದೇವಸ್ಥಾನದ ಜಾತ್ರಾ ಮಹೋತ್ಸವ ಅಂಗವಾಗಿ ಮಂಗಳವಾರ ಗೋದೂಳಿ ಸಮಯದಲ್ಲಿ ಅಪಾರ ಭಕ್ತರ ಮಧ್ಯೆ ಅದ್ದೂರಿ ಜೋಡಿ ರಥೋತ್ಸವಗಳು ನೆರವೇರಿದವು.

ಜಾತ್ರಾ ಅಂಗವಾಗಿ ಬೆಳಗ್ಗಿನಿಂದಲೇ ಗ್ರಾಮದಲ್ಲಿ ಹಬ್ಬದ ವಾತಾವರಣ ಕಂಡುಬಂದಿದ್ದು, ಮಹಿಳೆಯರು ಹಾಗೂ ಮಕ್ಕಳು ಹೊಸ ಉಡುಪು ಧರಿಸಿ ತಂಡೋಪ ತಂಡವಾಗಿ ದಿಂಗಾಲೇಶ್ವರ ಮಠ ಮತ್ತು ಉತ್ತರಾಭಿಮುಖ ಆಂಜನೇಯ ದೇವಸ್ಥಾನಕ್ಕೆ ಆಗಮಿಸಿದರು. ಭಕ್ತರು ರಥಕ್ಕೆ ಉಡಿ ತುಂಬಿ, ಹೊಸ ವಸ್ತ್ರಾಭರಣಗಳನ್ನು ಅರ್ಪಿಸಿ ಭಕ್ತಿ ಪೂರ್ವಕವಾಗಿ ಪೂಜೆ ಸಲ್ಲಿಸಿದರು.

ಸಂಜೆ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳ ನೇತೃತ್ವದಲ್ಲಿ ಸಕಲ ವಾದ್ಯ ವೈಭವಗಳೊಂದಿಗೆ ರಥೋತ್ಸವ ನೆರವೇರಿತು. ರಥಗಳು ಗ್ರಾಮದ ಪ್ರಮುಖ ಸ್ಥಳದಲ್ಲಿ ಒಂದಾಗುತ್ತಿದ್ದಂತೆ ಭಕ್ತರ ಘೋಷಣೆಗಳು ಮುಗಿಲು ಮುಟ್ಟಿದವು. ಭಕ್ತರು ಉತ್ತತ್ತಿ, ಹಣ್ಣುಗಳನ್ನು ತೇರಿಗೆ ಎಸೆದು ಭಕ್ತಿ ಪ್ರದರ್ಶಿಸಿದರು.

ಬುಧವಾರ ಸಂಜೆ ಸಂಪ್ರದಾಯದಂತೆ ಕಡುಬಿನ ಕಾಳಗ ಕಾರ್ಯಕ್ರಮ ಸಾವಿರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನೆರವೇರಿತು. ಶ್ರೀಮಠದ ಪಟ್ಟಾಧ್ಯಕ್ಷರಾದ ಶ್ರೀ ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಕುದುರೆ ಮೇಲೆ ಸವಾರಿ ಮಾಡಿ ರಥ ಪ್ರದಕ್ಷಿಣೆ ಹಾಕುತ್ತಾ ಕಡುಬಿನ ಕಾಳಗ ಸಂಪ್ರದಾಯವನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಕಡುಬಿನ ಚೂರುಗಳು, ಬೆಂಡು, ಬತ್ತಾಸ, ಬಿಸ್ಕಟ್, ಬೆಲ್ಲ, ಹಣ್ಣು, ಕಲ್ಲುಸಕ್ಕರೆ ಹಾಗೂ ಉತ್ತತ್ತಿಗಳನ್ನು ಭಕ್ತರತ್ತ ಎಸೆದರು. ಭಕ್ತರು ಇದನ್ನು ಪ್ರಸಾದವೆಂದು ಭಾವಿಸಿ ಭಕ್ತಿಭಾವದಿಂದ ಸ್ವೀಕರಿಸಿದರು.

ಬಾಲೇಹೊಸೂರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಜಾತ್ರೆಯಲ್ಲಿ ಭಾಗವಹಿಸಿದ್ದರು. ವಿವಿಧ ಮಠಾಧೀಶರು, ಜಾತ್ರಾ ಸಮಿತಿ ಸದಸ್ಯರು ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ಹೋಟೆಲ್ ಒಡೆಯರ ಸಂಘದ ನೂತನ ಕಟ್ಟಡ ಉದ್ಘಾಟನೆ ನಾಳೆ




**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಹೋಟೆಲ್ ಒಡೆಯರ ಸಂಘದ ನೂತನ ಕಟ್ಟಡದ ಉದ್ಘಾಟನಾ ಸಮಾರಂಭ ಎಪ್ರಿಲ್ 10ರಂದು ಬೆಳಿಗ್ಗೆ 10.30ಕ್ಕೆ ನಡೆಯಲಿದೆ ಎಂದು ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಎಚ್. ವಿಶ್ವನಾಥ ಶೆಟ್ಟಿ ತಿಳಿಸಿದ್ದಾರೆ.

ನಗರದ ಹೊಸ ಬಸ್ ನಿಲ್ದಾಣದ ಸಮೀಪ ಅಂದಾಜು 60 ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ಕಟ್ಟಡವನ್ನು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಕರ್ನಾಟಕ ರಾಜ್ಯ ಹೋಟೆಲ್ ಮಾಲೀಕರ ಸಂಘದ ರಾಜ್ಯಾಧ್ಯಕ್ಷ ಜಿ.ಕೆ. ಶೆಟ್ಟಿ, ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ನಗರಸಭೆ ಸದಸ್ಯೆ ಪದ್ಮಾ ಕಟಗಿ, ಸಂಘದ ಗೌರವಾಧ್ಯಕ್ಷ ಕೆ. ಸುಧಾಕರ ರಾವ್ ಹಾಗೂ ಜಿ. ರಾಜೀವ್ ಶೆಟ್ಟಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮಕ್ಕೆ ಎಚ್. ವಿಶ್ವನಾಥ ಶೆಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ.

▸▸ 3ನೇ ಪುಟಕ್ಕೆ

## ಆಸ್ಟ್ರೇಲಿಯಾ ಅಂಡರ್-19 ವಿರುದ್ಧ ಶಶಾಂಕ್ ಮೆಣಸಿನಕಾಯಿ ವೇಗದ ಬ್ಯಾಟಿಂಗ್

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಆಸ್ಟ್ರೇಲಿಯಾ ಅಂಡರ್-19 ತಂಡದ ವಿರುದ್ಧ ನಡೆದ ಪಂದ್ಯದಲ್ಲಿ ಶಶಾಂಕ್ ಅನಿಲ ಮೆಣಸಿನಕಾಯಿ ಅವರು ತಮ್ಮ ಅದ್ಭುತ ಬ್ಯಾಟಿಂಗ್ ಪ್ರದರ್ಶನದ ಮೂಲಕ ಎಲ್ಲರ ಗಮನ ಸೆಳೆದಿದ್ದಾರೆ.

ಈ ಪಂದ್ಯದಲ್ಲಿ ಬೆಂಗಳೂರು ತಂಡ ಭರ್ಜರಿ ಜಯ ಸಾಧಿಸಿದ್ದು, ಶಶಾಂಕ್ ಕೇವಲ 13 ಚೆಂಡುಗಳಲ್ಲಿ ವೇಗದ 27 ರನ್ ಗಳಿಸಿ ತಂಡದ ಗೆಲುವಿಗೆ ಮಹತ್ವದ ಕೊಡುಗೆ ನೀಡಿದ್ದಾರೆ.



ಗದಗ ಜಿಲ್ಲೆಯ ಯುವ ನಾಯಕ ಅನಿಲ ಮೆಣಸಿನಕಾಯಿ ಅವರ ಪುತ್ರರಾದ ಶಶಾಂಕ್ ಅವರ ಈ ಸಾಧನೆಗೆ ವಕೀಲರು ಹಾಗೂ ಬಿಜೆಪಿ ಮುಖಂಡ ರವಿಕಾಂತ ಅಂಗಡಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಶಶಾಂಕ್ ಮುಂದಿನ ಪಂದ್ಯಗಳಲ್ಲಿಯೂ ಉತ್ತಮ ಪ್ರದರ್ಶನ ನೀಡಿ ಗದಗ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಲಿ ಎಂದು ಅವರು ಶುಭ ಹಾರೈಸಿದ್ದಾರೆ.

### ಬಸವಜಯ ಮೃತ್ಯುಂಜಯ ಸ್ವಾಮೀಜಿ ಪ್ರಕರಣದ ಕುರಿತು ಪಂಚಮಸಾಲಿ ಸಮಾಜದ ಆಕ್ರೋಶ; ಸರ್ಕಾರದ ವಿರುದ್ಧ ಗಂಭೀರ ಆರೋಪ

## ಸ್ವಾಮೀಜಿ ವಿರುದ್ಧ ಷಡ್ಯಂತ್ರ ಆರೋಪ: ತನಿಖೆಗೆ ಆಗ್ರಹ




**■ ವಿಜಯಸಾಕ್ಷಿ ಸುದ್ದಿ, ಗದಗ**

'ಪಂಚಮಸಾಲಿ ಸಮಾಜದ ಬಸವಜಯ ಮೃತ್ಯುಂಜಯ ಸ್ವಾಮೀಜಿ ವಿರುದ್ಧ ದೊಡ್ಡ ರಾಜಕೀಯ ಷಡ್ಯಂತ್ರ ನಡೆದಿದೆ. ಸರ್ಕಾರ ಕೂಡಲೇ ಸಮಗ್ರ ತನಿಖೆ ಆರಂಭಿಸಬೇಕು. ಸ್ವಾಮೀಜಿ ತಪ್ಪು ಮಾಡಿದ್ದರೆ ಕಾನೂನು ಪ್ರಕಾರ ಶಿಕ್ಷೆ ಆಗಲಿ, ಆದರೆ ಷಡ್ಯಂತ್ರ ಸಾಬೀತಾದರೆ ಸಂಬಂಧಪಟ್ಟವರ ಮೇಲೆ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ರಾಜ್ಯವ್ಯಾಪಿ ಬೃಹತ್ ಹೋರಾಟಕ್ಕೆ ಕರೆ ನೀಡಲಾಗುವುದು' ಎಂದು ಪಂಚ ಸೇನೆ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ ಮನಗುಂಡಿ ಎಚ್ಚರಿಸಿದರು.

> "ಸ್ವಾಮೀಜಿಯವರ ವಿರುದ್ಧ ರಾಜಕೀಯ ಪ್ರೇರಿತ ಷಡ್ಯಂತ್ರ ನಡೆಯುತ್ತಿದ್ದು, ಸಮಾಜ ಅವರ ಬೆನ್ನಿಗೆ ನಿಲ್ಲಲಿದೆ. ಇದು ಕೇವಲ ವ್ಯಕ್ತಿಯ ಮೇಲೆ ಆರೋಪವಲ್ಲ, ಇಡೀ ಸಮಾಜದ ಮೇಲೆ ದಾಳಿ."
>
> – **ಅಯ್ಯಪ್ಪ ಅಂಗಡಿ,** ಗದಗ ಜಿಲ್ಲಾ ಪಂಚಮಸಾಲಿ ಸಮಾಜದ ಯುವ ಘಟಕದ ಅಧ್ಯಕ್ಷ.

ಬುಧವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 'ಪಂಚಮಸಾಲಿ ಸಮಾಜ ಯಾರೊಬ್ಬರ ವೈಯಕ್ತಿಕ ಸ್ವತ್ತು ಅಲ್ಲ. ಆದರೆ ಕೆಲವರು ಸಮಾಜದ ಹೆಸರಿನಲ್ಲಿ ತಮ್ಮ ರಾಜಕೀಯ ಲಾಭ ಸಾಧಿಸಲು ಪ್ರಯತ್ನಿಸುತ್ತಿದ್ದಾರೆ. ಸಮಾಜವನ್ನು ರಾಜಕೀಯ ಕಪಿಮುಷ್ಠಿಯಿಂದ ಮುಕ್ತಗೊಳಿಸಿದ ಹಿನ್ನೆಲೆಯಲ್ಲಿ ಶ್ರೀಗಳ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪದ ರೂಪದಲ್ಲಿ ಷಡ್ಯಂತ್ರ ರೂಪಿಸಲಾಗಿದೆ' ಎಂದು ಆರೋಪಿಸಿದರು.

ಪೊಲೀಸ್ ಇಲಾಖೆ ವ್ಯಾಪ್ತಿಯಲ್ಲಿ ನಡೆಯುವ ಹಲವು ▸▸ 3ನೇ ಪುಟಕ್ಕೆ

### ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ಅಶೋಕ ಮಂದಾಲಿ ವಾಗ್ದಾಳಿ

# ಬೆಲೆ ಏರಿಕೆಗಳಿಂದ ಜನರ ಬದುಕು ಸಂಕಷ್ಟಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

2014ರ ಲೋಕಸಭಾ ಚುನಾವಣೆಯಲ್ಲಿ ಅಚ್ಚೆ ದಿನ್ ಎಂಬ ಭರವಸೆ ನೀಡಿ ಅಧಿಕಾರಕ್ಕೆ ಬಂದ ಕೇಂದ್ರ ಬಿಜೆಪಿ ಸರ್ಕಾರ, ಇದೀಗ ನಿರಂತರ ಬೆಲೆ ಏರಿಕೆ ಮೂಲಕ ಜನಸಾಮಾನ್ಯರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷರು ಹಾಗೂ ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾಗಿರುವ ಅಶೋಕ ಮಂದಾಲಿ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2026ರ ಎಪ್ರಿಲ್ 1ರಿಂದ ರಾಷ್ಟ್ರೀಯ ಹೆದ್ದಾರಿಗಳ ಟೋಲ್ ದರವನ್ನು ಶೇ. 5ರಷ್ಟು ಹೆಚ್ಚಿಸಲಾಗಿದೆ. LPG ಬೆಲೆಗಳನ್ನು ನಿರಂತರವಾಗಿ ಏರಿಸುತ್ತಿರುವ ಕೇಂದ್ರ ಸರ್ಕಾರ ಮಾರ್ಚ್ 7, 2026ರಂದು ಗೃಹ ಬಳಕೆಯ LPGಗೆ 60 ಹಾಗೂ ವಾಣಿಜ್ಯ ಬಳಕೆಗೆ 115 ಹೆಚ್ಚಳ ಮಾಡಿದೆ. ನಂತರ ಎಪ್ರಿಲ್ 1ರಂದು ಮತ್ತೆ ವಾಣಿಜ್ಯ LPG ಬೆಲೆ 195.50 ಹೆಚ್ಚಳವಾಗಿ 2,200 ತಲುಪಿದ್ದು, 5 ಕೆಜಿ ಗೃಹ ಬಳಕೆಯ LPGಗೆ 51 ಹೆಚ್ಚಳ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಆಟೋ LPG ದರವೂ 11.78 ಹೆಚ್ಚಳವಾಗಿ 89.52 ತಲುಪಿದ್ದು, ದಿನಗೂಲಿ ಆಧಾರಿತ ಜೀವನ ನಡೆಸುವ ಆಟೋ ಚಾಲಕರಿಗೆ ಸಂಕಷ್ಟ ತಂದಿದೆ. ವೈಮಾನಿಕ ಇಂಧನ (ATF) ದರವೂ ಪ್ರತಿ 1000 ಲೀಟರ್‌ಗೆ 2 ಲಕ್ಷ ಗಡಿ ದಾಟಿದ ಪರಿಣಾಮ ವಿಮಾನ ಟಿಕೆಟ್ ದರವೂ ಏರಿಕೆಯಾಗಿದೆ ಎಂದು ಹೇಳಿದ್ದಾರೆ.

2026ರ ಮೊದಲ ಮೂರು ತಿಂಗಳಲ್ಲಿ ವಾಣಿಜ್ಯ LPG ಮೇಲೆ ಸುಮಾರು 300 ಮತ್ತು ಗೃಹ ಬಳಕೆ LPG ಮೇಲೆ 60 ಏರಿಕೆಯಾಗಿದೆ. ಜೊತೆಗೆ ಔಷಧಿಗಳ ದರವನ್ನೂ ವರ್ಷದಿಂದ ವರ್ಷಕ್ಕೆ ಹೆಚ್ಚಿಸಲಾಗುತ್ತಿದ್ದು, 2026ರ ಎಪ್ರಿಲ್ 1ರಿಂದ 900ಕ್ಕೂ ಹೆಚ್ಚು ಔಷಧಿಗಳ ಬೆಲೆ ಏರಿಕೆಯಾಗಿದೆ ಎಂದು ತಿಳಿಸಿದ್ದಾರೆ.



ಹಾಲು, ಮೊಸರು, ಬೆಣ್ಣೆ ಸೇರಿದಂತೆ ಅಗತ್ಯ ವಸ್ತುಗಳ ಮೇಲೆ ಶೇ. 18ರಷ್ಟು GST ವಿಧಿಸಿರುವ ಕೇಂದ್ರ ಸರ್ಕಾರ 2025-26ರಲ್ಲಿ 42 ಲಕ್ಷ ಕೋಟಿ ತೆರಿಗೆ ಸಂಗ್ರಹಿಸಿದೆ. ದೇಶದ ಕುಟುಂಬಗಳ ಸಾಲ GDPಯ ಶೇ. 38ಕ್ಕೆ ತಲುಪಿದ್ದು, 2014ರ 55 ಲಕ್ಷ ಕೋಟಿಯಿಂದ 216 ಲಕ್ಷ ಕೋಟಿಗೆ ದೇಶದ ಸಾಲ ಹೆಚ್ಚಾಗಿದೆ ಎಂದು ಆರೋಪಿಸಿದ್ದಾರೆ.

> "ಅಚ್ಚೆ ದಿನ್ ಎಂದು ಹೇಳಿ ಅಧಿಕಾರಕ್ಕೆ ಬಂದ ಬಿಜೆಪಿ ಸರ್ಕಾರ, ಇಂದು ಬೆಲೆ ಏರಿಕೆಯ ಮೂಲಕ ಜನರ ಬದುಕನ್ನೇ ನರಕ ಮಾಡಿದೆ."
>
> – **ಅಶೋಕ ಮಂದಾಲಿ,** ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ.

ಜನಸಾಮಾನ್ಯರ ಆದಾಯದ ಅರ್ಧ ಭಾಗವನ್ನು ಆಹಾರ ಖರೀದಿಗೆ ಖರ್ಚು ಮಾಡುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಕುಟುಂಬಗಳ ಉಳಿತಾಯ 45 ವರ್ಷದ ಕನಿಷ್ಠ ಮಟ್ಟಕ್ಕೆ ಕುಸಿದಿದೆ.

ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ಸುಂಕ ಹೆಚ್ಚಳದಿಂದ 2014ರಲ್ಲಿ 71 ಇದ್ದ ಪೆಟ್ರೋಲ್ ಬೆಲೆ ಈಗ 103ಕ್ಕಿಂತ ಹೆಚ್ಚು ಹಾಗೂ 55 ಇದ್ದ ಡೀಸೆಲ್ 90ಕ್ಕಿಂತ ಹೆಚ್ಚು ಏರಿಕೆಯಾಗಿದೆ. ಕಚ್ಚಾ ತೈಲ ಬೆಲೆ ಕಡಿಮೆಯಾಗಿದ್ದರೂ ಇಂಧನ ದರ ಇಳಿಕೆ ಮಾಡದಿರುವುದು ಕೇಂದ್ರ ಸರ್ಕಾರದ ವೈಫಲ್ಯ ಎಂದು ಟೀಕಿಸಿದ್ದಾರೆ.

ಕೇಂದ್ರ ಸರ್ಕಾರದ ಬೆಲೆ ಏರಿಕೆ ನಡುವೆಯೇ ರಾಜ್ಯ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು, ವಿಶೇಷವಾಗಿ ಗೃಹ ಲಕ್ಷ್ಮೀ ಯೋಜನೆಯ 2000 ಸಹಾಯಧನ ಜನರಿಗೆ ನೆರವಾಗುತ್ತಿದೆ ಎಂದು ತಿಳಿಸಿದ್ದಾರೆ.

ರೂಪಾಯಿ ಮೌಲ್ಯ ಕುಸಿತ, ನಿರುದ್ಯೋಗ ಸಮಸ್ಯೆ ಹಾಗೂ ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ಅನ್ಯಾಯ ಮಾಡಿರುವುದನ್ನೂ ಮಂದಾಲಿ ಅವರು ಉಲ್ಲೇಖಿಸಿದ್ದಾರೆ.

## ಶಿಕ್ಷಕರ ವಿನಿಮಯ ಕಾರ್ಯಕ್ರಮದಿಂದ ವಿದ್ಯಾರ್ಥಿಗಳ ಜ್ಞಾನ ವಿಸ್ತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಗೃಹ ವಿಜ್ಞಾನ ವಿಭಾಗದ ವತಿಯಿಂದ ಎಪ್ರಿಲ್ 6ರಂದು ಶಿಕ್ಷಕರ ವಿನಿಮಯ ಕಾರ್ಯಕ್ರಮ ಆಯೋಜಿಸಲಾಗಿತ್ತು.

ವಿದ್ಯಾರ್ಥಿಗಳಲ್ಲಿ ವಿಸ್ತರಣಾ ಶಿಕ್ಷಣದ ಅರಿವು ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ನಡೆಯಿತು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಅಂಕೋಲಾ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಗೃಹ ವಿಜ್ಞಾನ ಉಪನ್ಯಾಸಕಿ ಡಾ. ಆಶಾ ಸಾಲಿ "ವಿಸ್ತರಣಾ ಶಿಕ್ಷಣದ ಬೋಧನಾ ವಿಧಾನಗಳು ಮತ್ತು ಗೃಹ ವಿಜ್ಞಾನದ ಪಾತ್ರ" ವಿಷಯದ ಕುರಿತು ಉಪನ್ಯಾಸ ನೀಡಿದರು. ಪ್ರಾತ್ಯಕ್ಷಿಕೆ, ಕಾರ್ಯಾಗಾರ, ಚರ್ಚಾ ವಲಯ, ಪಾತ್ರ ಭಾಜನೆ ಹಾಗೂ ದೃಶ್ಯ ಸಾಧನಗಳ ಬಳಕೆಯಂತಹ ವಿಧಾನಗಳ ಮೂಲಕ ಗ್ರಾಮೀಣ ಮತ್ತು ನಗರ ಸಮುದಾಯಗಳಿಗೆ ಜ್ಞಾನವನ್ನು ಸುಲಭವಾಗಿ ತಲುಪಿಸಬಹುದೆಂದು ಅವರು ವಿವರಿಸಿದರು. ಗೃಹ ವಿಜ್ಞಾನವು ಆರೋಗ್ಯ, ಪೌಷ್ಠಿಕತೆ, ಕುಟುಂಬ ನಿರ್ವಹಣೆ ಮತ್ತು ಮಕ್ಕಳ ಆರೈಕೆ ಸೇರಿದಂತೆ ಜೀವನಪರ ಕೌಶಲ್ಯಗಳನ್ನು ಬೆಳೆಸುವ ಪ್ರಮುಖ ಕ್ಷೇತ್ರವಾಗಿದ್ದು, ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಸಮಾಜದ ಹಿತಕ್ಕಾಗಿ ಬಳಸಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲ ಡಾ. ಎ.ಕೆ. ಮಠ, ವಿಸ್ತರಣಾ ಶಿಕ್ಷಣದಂತಹ ಜಾಗೃತಿ ಕಾರ್ಯಕ್ರಮಗಳು ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಸಹಕಾರಿಯಾಗುತ್ತವೆ ಎಂದು ಹೇಳಿದರು.

ಗೃಹ ವಿಜ್ಞಾನ ವಿಭಾಗದ ಮುಖ್ಯಸ್ಥೆ ವೀಣಾ ತಿರ್ಲಾಪುರ ಅತಿಥಿಯನ್ನು ಪರಿಚಯಿಸಿದರು. ಕುಮಾರಿ ಚೈತ್ರಾ ಮುತ್ತಾಳ ಸ್ವಾಗತಿಸಿ, ವಿದ್ಯಾರ್ಥಿಗಳು ಸಂವಾದದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಪ್ರಶ್ನೆಗಳ ಮೂಲಕ ತಮ್ಮ ಸಂದೇಹಗಳನ್ನು ನಿವಾರಿಸಿಕೊಂಡರು.

# ಶ್ರಮದ ಬೆವರಿನ ಫಲ ಶಾಶ್ವತ

### ಅರಟಾಳ ಗ್ರಾಮದಲ್ಲಿ ಧರ್ಮ ಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಜಗದ್ಗುರುಗಳು



■ವಿಜಯಸಾಕ್ಷಿ ಸುದ್ದಿ, ಶಿಗ್ಗಾಂವಿ

ಮನುಷ್ಯ ಪ್ರಜ್ಞಾವಂತನಾಗಿ ಹೃದಯ ಶ್ರೀಮಂತಿಕೆಯುಳ್ಳವನಾಗಿ ಬಾಳಿದರೆ ಜೀವನ ಸಾರ್ಥಕವಾಗುತ್ತದೆ. ಶ್ರಮದ ಬೆವರಿನ ಫಲ ಯಾವಾಗಲೂ ಶಾಶ್ವತವಾಗಿದ್ದು ಸುಖದಾಯಕವಾಗಿರುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಅರಟಾಳ ಗ್ರಾಮದ ಕ್ಷೇತ್ರನಾಥ ಶ್ರೀ ವರವೀರಭದ್ರಸ್ವಾಮಿ 32ನೇ ವಾರ್ಷಿಕೋತ್ಸವ ಹಾಗೂ ಶೀಲಾ ಚನ್ನವೀರಗೌಡ ಪಾಟೀಲ ಮತ್ತು ಮಂಜುಳಾ ವೀರೇಶ ಪಾಟೀಲ ಅವರ ಷಷ್ಠಿಪೂರ್ತಿ ಸಮಾರಂಭದ ಅಂಗವಾಗಿ ನಡೆದ ಧರ್ಮ ಜಾಗೃತಿ ಸಮಾರಂಭದಲ್ಲಿ ಅವರು ಸಾನ್ನಿಧ್ಯ ವಹಿಸಿ ಮಾತನಾಡಿದರು.

ಮನುಷ್ಯನಾಗಿ ಬದುಕುವುದು ಸುಲಭ, ಆದರೆ ಮಾನವೀಯತೆ ಹೊಂದಿ ಬದುಕುವುದು ಕಷ್ಟ. ಒಳ್ಳೆಯ ನಡವಳಿಕೆಯೇ ನಿಜವಾದ ಧರ್ಮ. ಸುಖ-ಸಮೃದ್ಧಿಗಳು ಹೆಚ್ಚಾಗುತ್ತಿದ್ದರೂ ಸಂಸ್ಕೃತಿ ಬೆಳೆಯುತ್ತಿಲ್ಲ ಎಂದು ವಿಷಾದಿಸಿದರು.

ವಿದ್ಯೆ ಹೆಚ್ಚಾದಷ್ಟೂ ಹೃದಯ ಪರಿವರ್ತನೆ ಆಗದಿರುವುದು ಇಂದಿನ ಗೊಂದಲಗಳಿಗೆ ಕಾರಣವಾಗಿದೆ. ಕಷ್ಟಗಳಲ್ಲಿ ಅಚಲತೆಯುಳ್ಳ ಗಟ್ಟಿತನ ಬೆಳೆಸಿಕೊಳ್ಳಬೇಕು. ವಿವೇಕ, ಶ್ರದ್ಧೆ ಮತ್ತು ನಿಷ್ಠೆ ಜೀವನದಲ್ಲಿ ಮುಖ್ಯವಾಗಿದ್ದು, ಧರ್ಮ ಮತ್ತು ಗುರುಕೃಪೆಯಿಂದ ಅರಿವು ಮೂಡುತ್ತದೆ ಎಂದು ಹೇಳಿದರು.

ದುಷ್ಟರ ಸಂಹಾರ ಹಾಗೂ ಶಿಷ್ಟರ ರಕ್ಷಣೆಗೆ ಅವತರಿಸಿದ ಶ್ರೀ ವೀರಭದ್ರಸ್ವಾಮಿಯ ವಾರ್ಷಿಕೋತ್ಸವ ಹಮ್ಮಿಕೊಂಡಿರುವುದು ಹೆಮ್ಮೆಯ ಸಂಗತಿ ಎಂದು ಅವರು ಹೇಳಿದರು. ಇದೇ ಸಂದರ್ಭದಲ್ಲಿ ಷಷ್ಠಿಪೂರ್ತಿ ಸಮಾರಂಭ ಆಯೋಜಿಸಿರುವುದು ಕುಟುಂಬದ ಧರ್ಮನಿಷ್ಠೆ ಹಾಗೂ ಗುರುಭಕ್ತಿಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ಲಿಂ. ರುದ್ರಗೌಡ ಪಾಟೀಲ ಅವರ ಕೊಡುಗೆಯನ್ನು ಸ್ಮರಿಸಿದರು.

> "ಅರಟಾಳು ರುದ್ರಗೌಡ ಪಾಟೀಲರು ಕೆ.ಎಲ್.ಇ. ಸಂಸ್ಥೆಯ ಅಭಿವೃದ್ಧಿಗೆ ಮಹತ್ವದ ಪಾತ್ರ ವಹಿಸಿದ್ದು, ಅವರ ಸ್ಮರಣಾರ್ಥ ಶೈಕ್ಷಣಿಕ ಕೇಂದ್ರ ಸ್ಥಾಪಿಸಬೇಕು."
>
> – ಬಸವರಾಜ ಬೊಮ್ಮಾಯಿ, ಸಂಸದ.

# ಸಾಂಸ್ಕೃತಿಕ ಕಾರ್ಯಕ್ರಮಗಳು ಮನಸ್ಸಿಗೆ ಮುದನೀಡುತ್ತವೆ

### ಸಾಂಸ್ಕೃತಿಕ ಸೌರಭ-2026 ಕಾರ್ಯಕ್ರಮದಲ್ಲಿ ಫಕೀರೇಶ್ವರ ಮಹಾಸ್ವಾಮಿಗಳ ಅಭಿಪ್ರಾಯ



> "ಸಾಂಸ್ಕೃತಿಕ ಕಾರ್ಯಕ್ರಮಗಳು ಮನಸ್ಸಿಗೆ ತಾಜಾತನ ನೀಡುತ್ತವೆ. ಜಾನಪದ ಕಲೆ ಮತ್ತು ಸಂಸ್ಕೃತಿಯನ್ನು ಉಳಿಸುವುದು ನಮ್ಮೆಲ್ಲರ ಕರ್ತವ್ಯ."
>
> – ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು.

■ವಿಜಯಸಾಕ್ಷಿ ಸುದ್ದಿ, ಗದಗ

ನಾಡಿನ ಕಲೆ, ಸಂಗೀತ, ಸಾಹಿತ್ಯ ಮತ್ತು ಜಾನಪದ ಸಂಸ್ಕೃತಿ ನಮ್ಮ ಬದುಕಿನ ಅವಿಭಾಜ್ಯ ಅಂಗವಾಗಿದ್ದು, ಸಾಂಸ್ಕೃತಿಕ ಕಾರ್ಯಕ್ರಮಗಳು ಮನಸ್ಸಿಗೆ ತಾಜಾತನ ಮತ್ತು ಮುದನೀಡುತ್ತವೆ ಎಂದು ಓಂಕಾರೇಶ್ವರ ಹಿರೇಮಠದ ಶ್ರೀ ಷಟಸ್ಥಲ್‌ಬ್ರಹ್ಮ ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಎಚ್.ಎಸ್. ವೆಂಕಟಾಪೂರ ಗ್ರಾಮದಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಸಾಂಸ್ಕೃತಿಕ ಕಲಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಬೆಂಗಳೂರು ಜಂಟಿ ಆಶ್ರಯದಲ್ಲಿ ನಡೆದ ಸಾಂಸ್ಕೃತಿಕ ಸೌರಭ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡ ವೀರಪ್ಪ ನಿಂಗಪ್ಪ ತಳವಾರ ಮಾತನಾಡಿ, ನಿಜವಾದ ಕಲೆ ಗ್ರಾಮೀಣ ಪ್ರದೇಶದಲ್ಲೇ ಅಡಕವಾಗಿದ್ದು, ಅದನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕಲಾವಿದನ ಕರ್ತವ್ಯ ಎಂದು ಹೇಳಿದರು.

ಕಾರ್ಯಕ್ರಮದ ನೇತೃತ್ವ ವಹಿಸಿದ ಎಚ್.ಎಸ್. ವೆಂಕಟಾಪೂರ ಹಾಗೂ ಜಿಗೇರಿ ಶಾಖಾ ಮಠದ ಶ್ರೀ ಷಟಸ್ಥಲ್‌ಬ್ರಹ್ಮ ಗುರುಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಜಾನಪದ ಕಲಾವಿದರು ಉಳಿದರೆ ಮಾತ್ರ ಕಲೆ ಮತ್ತು ಸಂಸ್ಕೃತಿ ಉಳಿಯುತ್ತದೆ. ನೆಲಮೂಲದ ಜಾನಪದ ಸಂಸ್ಕೃತಿಯನ್ನು ನಾವು ಮರೆಯದೇ ಮುಂದುವರಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸುಗಮ ಸಂಗೀತ, ಜನಪದ ಗೀತೆ, ಭಜನೆ, ಕೋಲಾಟ, ಜೋಗತಿ ನೃತ್ಯ, ಮಲ್ಲಕಂಬ ಪ್ರದರ್ಶನ ಹಾಗೂ ತತ್ವಪದಗಳು ಪ್ರೇಕ್ಷಕರ ಮನಸೆಳೆದವು. ಬಸವರಾಜ ಅಡವಳ್ಳಿ, ನಿಂಗಪ್ಪ ಗುಡ್ಡ, ಸಾವಿತ್ರಿ ಲಮಾಣಿ, ಶಿವಪ್ಪ ಭಜಂತ್ರಿ, ರೇಣವ್ವ ಗೋಶಾಲನವರು, ಮಲ್ಲಪ್ಪ ಗೋಶಾಲನವರು, ಚಿದಾನಂದ ಅನವಾಲ, ಅರುಣೋದಯ ಸಾಂಸ್ಕೃತಿಕ ತಂಡ ಹಾಗೂ ಚಲುಕ್ಯ ಮಲ್ಲಕಂಬ ಅಕಾಡೆಮಿ ವಿದ್ಯಾರ್ಥಿಗಳು ತಮ್ಮ ಕಲಾಪ್ರತಿಭೆಯನ್ನು ಪ್ರದರ್ಶಿಸಿದರು.

ಶ್ರೀಮಹರ್ಷಿ ವಾಲ್ಮೀಕಿ ಸಾಂಸ್ಕೃತಿಕ ಕಲಾಸಂಸ್ಥೆಯ ಅಧ್ಯಕ್ಷ ಗೌಡಪ್ಪ ಬೊಮ್ಮಪ್ಪ ಅವರು ಅಧ್ಯಕ್ಷತೆ ವಹಿಸಿದ್ದರು. ವಿವಿಧ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸಹಕಾರಿ ಸಂಘದ ಅಧಿಕಾರಿಗಳು ಹಾಗೂ ಜಾನಪದ ಕಲಾ ಕ್ಷೇತ್ರದ ಹಿರಿಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# "ಗ್ಯಾಂಗ್ಸ್ ಆಫ್ ಯುಕೆ" ಚಿತ್ರವನ್ನು ಪ್ರೇಕ್ಷಕರು ಖಂಡಿತ ಗೆಲ್ಲಿಸ್ತಾರೆ: ರವಿ ಶ್ರೀವತ್ಸ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಡೆಡ್ಲಿ ಸೋಮ, ಮಾದೇಶ ಸಿನಿಮಾ ಖ್ಯಾತಿಯ ಖ್ಯಾತ ನಿರ್ದೇಶಕ ರವಿ ಶ್ರೀವತ್ಸ ಅವರ ಡೆಡ್ಲಿ ಆರ್ಟ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಿದ 'ಗ್ಯಾಂಗ್ಸ್ ಆಫ್ ಯುಕೆ' ಚಿತ್ರವು ಎ.10ರಂದು ರಾಜ್ಯಾದ್ಯಂತ ಬಿಡುಗಡೆಯಾಗಲಿದೆ.

'ಗ್ಯಾಂಗ್ಸ್ ಆಫ್ ಯುಕೆ'(ಉತ್ತರ ಕರ್ನಾಟಕ) ಚಿತ್ರವು 'ಭೀಮೆಯ ಮಡಿಲಲ್ಲಿ' ಎಂಬ ಉಪಶೀರ್ಷಿಕೆ ಒಳಗೊಂಡಿದ್ದು, ಉತ್ತರ ಕರ್ನಾಟಕದ ಕಪ್ಪು ಮಣ್ಣಿನಲ್ಲಿ ನಡೆದ ಹೆಣ್ಣುಮಕ್ಕಳ ರಕ್ತ ಕಣ್ಣೀರಿನ ಹಾಗೂ ಮಾನವೀಯ ಬಾಂಧವ್ಯಗಳ ನಡುವಿನ ನೈಜ ಘಟನೆ ಆಧರಿಸಿದ ಚಿತ್ರವಾಗಿದೆ. ಬಾಗಲಕೋಟೆ ಜಿಲ್ಲೆಯಲ್ಲೇ ಸಂಪೂರ್ಣ ಚಿತ್ರೀಕರಣವಾಗಿದ್ದು, ಹೆರಕಲ್, ಶಿರೂರು, ಹುನಗುಂದ, ಅಮರಾವತಿ, ಇಳಕಲ್, ಅಮಿನಗಡ ಅಲ್ಲದೆ ಬೆಂಗಳೂರಿನಲ್ಲೂ ಚಿತ್ರೀಕರಿಸಲಾಗಿದೆ.

ಉತ್ತರ ಕರ್ನಾಟಕದ ಐವತ್ತಕ್ಕೂ ಹೆಚ್ಚು ರಂಗಭೂಮಿ ಕಲಾವಿದರು, ಹೊಸ ಕಲಾವಿದರು ಅಭಿನಯಿಸಿರುವುದು ಅದರಲ್ಲೂ ಸ್ಥಳೀಯ ಕಲಾವಿದರೇ ಅಭಿನಯಿಸಿರುವುದು ವಿಶೇಷವಾಗಿದೆ. ಸಂತ ಶಿಶುನಾಳ ಶರೀಫರ ನಾಲ್ಕು ಗೀತೆಗಳನ್ನು ಚಿತ್ರದಲ್ಲಿ ಬಳಸಲಾಗಿದೆ. ರಕ್ತಕ್ಕೆ ರಕ್ತವೇ ಮಜ್ಜನ, ಜಿದ್ದು, ಒಬ್ಬರಿಂದ ಒಬ್ಬರಿಗೆ ಹೇಗೆ ವರ್ಗಾಯಿಸಿಕೊಂಡು ಹೋಗುತ್ತದೆ ಎಂಬುದೇ ಈ ಚಿತ್ರದ ವಿಷಯ.

ಇತ್ತೀಚೆಗೆ ಇದರ ಚಿತ್ರಗಳು, ವಿಡಿಯೋ ತುಣುಕುಗಳು ಎಲ್ಲೆಡೆ ವೈರಲ್ ಆಗುತ್ತಿವೆ. ಕನ್ನಡ ಚಿತ್ರರಂಗದಲ್ಲಿ ಇದೊಂದು ಧೂಳೆಬ್ಬಿಸುವ ಚಿತ್ರ ಆಗಲಿದೆ. ನನ್ನ ಹಿಂದಿನ ಚಿತ್ರಗಳಿಗಿಂತ ವಿಭಿನ್ನವಾಗಿದೆ ಎಂದು ನಿರ್ದೇಶಕ ರವಿ ಶ್ರೀವತ್ಸ ಹೇಳಿದ್ದಾರೆ. ಈ ಹಿಂದಿನ ತಮ್ಮ ಚಿತ್ರಗಳನ್ನು ಕನ್ನಡಿಗರು ಗೆಲ್ಲಿಸಿದ್ದಾರೆ. ಈ ಚಿತ್ರವನ್ನೂ ಗೆದ್ದೇ ಗೆಲ್ಲಿಸುತ್ತಾರೆ ಎಂಬ ಭರವಸೆಯಲ್ಲಿ ಚಿತ್ರತಂಡದೊಡಗೆ ಜನರ ಬಳಿಗೆ ಸಾಗಿ ಮೊದಲ ಹಂತದ ಪ್ರಚಾರಕಾರ್ಯ ಮುಗಿಸಿ ಎರಡನೆ ಹಂತದ ಪ್ರಚಾರ ಕಾರ್ಯ ಆರಂಭಿಸಿದ್ದಾರೆ. ಚಿತ್ರದ ತಾರಾಗಣದಲ್ಲಿ ಒರಟ ಪ್ರಶಾಂತ್, ಕಿಂಗ್ ಮುನಿ, ಸೋನು ಉಪಾಧ್ಯ, ಪೃಥ್ವಿ ಸುಬ್ಬಯ್ಯ, ಕೆ.ಆರ್. ಅಮೋಘ, ಸತ್ಯ, ಕೋಟೆ ಪ್ರಭಾಕರ, ಬಿ.ನವೀನ್ ಕಷ್ಣ, ಜೋತಿಷ್ ಶೆಟ್ಟಿ, ಪದ್ಮವಾಸಂತಿ, ಉಗ್ರಂ ರೆಡ್ಡಿ, ವಿಕಾಸ ಮದಕರಿ, ಕಿರಣ, ದಿಲ್ಲನ್ ಚೆಂಗಪ್ಪ, ಮಹಾಂತೇಶ ಗಜೇಂದ್ರಗಡ, ಮಹಾಂತೇಶ ಹಳ್ಳೂರ, ಅಮತ್ ಹಿರಣ್ಯ, ಗುರುರಾಜ ಗೌಡ, ನಂಜು ಸಿದ್ದಪ್ಪ, ರಮೇಶ ಮದಗುಂದ, ಸಕ್ಕರೆನಾಡು ಉಮೇಶ್ ಠಂಕಸಾಲಿ ಅಲ್ಲದೆ ಉತ್ತರ ಕರ್ನಾಟಕದ ಸ್ಥಳೀಯ ಕಲಾವಿದರನ್ನೂ ಬಳಸಲಾಗಿದೆ.

ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ಆರ್.ಗಿರಿ, ಸಂಭಾಷಣೆ ಎಂ.ಎಸ್. ರಮೇಶ, ಸಂಗೀತ ಸುಕುಮಾರ, ಸಂಕಲನ ಲಕ್ಷ್ಮಣ್ ನಾರಾಯಣ ರೆಡ್ಡಿ, ಸಾಹಸ ಥ್ರಿಲ್ಲರ್ ಮಂಜು, ಪ್ರಸಾಧನ ರಾಜೇಶ್, ವಸವಿನ್ಯಾಸ ಪುಟ್ಟರಾಜು, ಡಬ್ಬಿಂಗ್ ಆನಂದ, ಎಪೆಕ್ಸ್ ಸೇತು, ಪಿಆರ್‌ಓ ನಾಗೇಂದ್ರ, ಡಾ.ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಿಗಿ ಸಹಾಯಕ ನಿರ್ದೇಶನ ರಾವಣ ಅವರದ್ದು ಇದೆ. ಚಿತ್ರದ ಕಥೆ ಕ್ಷಣಕ್ಷಣಕ್ಕೂ ರೋಚಕವಾಗಿದ್ದು, ಪ್ರೇಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಚಿತ್ರಮಂದಿರಕ್ಕೆ ಬಂದು ಸಿನಿಮಾ ವೀಕ್ಷಿಸಿ ಯಶಸ್ವಿಗೊಳಿಸಬೇಕೆಂದು ನಿರ್ದೇಶಕರು ಮನವಿ ಮಾಡಿದ್ದಾರೆ.

# ಪತ್ರಿಗೀತಾ ಪತ್ರಿಯಲ್ಲಪ್ಪ ಅಧ್ಯಕ್ಷೆ, ಮಂಜುನಾಥ ಉಪಾಧ್ಯಕ್ಷ

### ಹಂಪಾಪಟ್ಟಣ ಗ್ರಾಮ ಪಂಚಾಯಿತಿಗೆ ಅಧ್ಯಕ್ಷೆ-ಉಪಾಧ್ಯಕ್ಷರ ಅವಿರೋಧ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ತಾಲೂಕಿನ ಹಂಪಾಪಟ್ಟಣ ಗ್ರಾಮ ಪಂಚಾಯಿತಿಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ತೆರವಾದ ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಶ್ರೀಮತಿ ಪತ್ರಿಗೀತಾ ಪತ್ರಿಯಲ್ಲಪ್ಪ ಅಧ್ಯಕ್ಷೆಯಾಗಿ ಹಾಗೂ ತಿಪ್ಪೆಗುಂಡಿ ಮಂಜುನಾಥ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಹಿಂದಿನ ಅಧ್ಯಕ್ಷೆ ಉಪ್ಪಾರ್ ಹುಲಿಗೆಮ್ಮ ಹಾಗೂ ಉಪಾಧ್ಯಕ್ಷ ಪಿ. ಗಣೇಶ್ ಅವರ ರಾಜೀನಾಮೆಯಿಂದಾಗಿ ಈ ಸ್ಥಾನಗಳು ತೆರವಾಗಿದ್ದವು. 18 ಸದಸ್ಯರನ್ನೊಳಗೊಂಡ ಪಂಚಾಯಿತಿಯಲ್ಲಿ ನಡೆದ ಚುನಾವಣೆಯಲ್ಲಿ ಏಕಮತದಿಂದ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿತು.

ತಹಸೀಲ್ದಾರ್ ಆರ್. ಕವಿತಾ ಅವರು ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸಿ, ಚುನಾವಣೆಯನ್ನು ಶಾಂತಿಯುತವಾಗಿ ನಡೆಸಿದರು.

ಈ ಸಂದರ್ಭದಲ್ಲಿ ಸದಸ್ಯರಾದ ಬಿ. ನಾಗರಾಜ್, ಎನ್. ನಾಗರಾಜ್, ಸಿ.ಎಲ್. ಕುಮಾರ, ಮಂಜುಳಾ ಅಂಜಿನಪ್ಪ, ಎಚ್. ಹನುಮಕ್ಕ, ಉಪ್ಪಾರ್ ಹುಲಿಗೆಮ್ಮ, ಎಸ್. ಗಾಳಪ್ಪ, ಬಿ. ವೆಂಕಟೇಶ್, ನಾಗರತ್ನ ಹಾಗೂ ಬಿ. ರಮೇಶ್ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಬುಡ್ಡಿ ಬಸವರಾಜ್, ಹಿಂದುಳಿದ ಜಾತಿ ಒಕ್ಕೂಟದ ಜಿಲ್ಲಾಧ್ಯಕ್ಷ ಕೆ. ಹುಲುಗಪ್ಪ, ಭಜಂತ್ರಿ ಸೋಮನಾಥ, ಅಶೋಕ, ನಜೀರ್ ಸಾಬ್, ಕೊಟ್ರಪ್ಪ, ಲಕ್ಷ್ಮಣ, ಮಣಿಗರ್ ನಾಗಭೂಷಣ ಸೇರಿದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳ ನಾಗರಿಕರು ನೂತನ ಪದಾಧಿಕಾರಿಗಳಿಗೆ ಶುಭಾಶಯಗಳನ್ನು ತಿಳಿಸಿದರು.

# ಪುರಸಭೆ ಪ್ರಭಾರಿ ಅಧ್ಯಕ್ಷೆಯಾಗಿ ನೇತ್ರಾವತಿ ಹುಚ್ಚಪ್ಪ ಅಧಿಕಾರ ಸ್ವೀಕಾರ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹಗರಿಬೊಮ್ಮನಹಳ್ಳಿ ಪುರಸಭೆಯ ಅಧ್ಯಕ್ಷರಾಗಿದ್ದ ಎಂ. ಮರಿರಾಮಪ್ಪ ಅವರ ರಾಜೀನಾಮೆ ಅಂಗೀಕಾರವಾದ ಹಿನ್ನೆಲೆ, ಉಪಾಧ್ಯಕ್ಷೆ ಸೆರೆಗಾರ್ ನೇತ್ರಾವತಿ ಹುಚ್ಚಪ್ಪ ಅವರು ಪ್ರಭಾರಿ ಅಧ್ಯಕ್ಷೆಯಾಗಿ ಅಧಿಕಾರ ಸ್ವೀಕರಿಸಿದರು.

ಅಧಿಕಾರ ಹಸ್ತಾಂತರ ಕಾರ್ಯಕ್ರಮದಲ್ಲಿ ಪುರಸಭೆ ಮುಖ್ಯಾಧಿಕಾರಿ ಎಂ.ಕೆ. ಮುಗಳಿ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಸದಸ್ಯರಾದ ಅಜೀಜುಲ್ಲಾ, ನೆಲ್ಲು ಇಸ್ಮಾಯಿಲ್, ಪವಾಡಿ ಹನುಮಂತಪ್ಪ, ಗಣೇಶ್, ಬಾರಿಕರ ಮಂಜುನಾಥ್ ಉಪಸ್ಥಿತರಿದ್ದರು.

ಹಾಗೂ ಮುಖಂಡರಾದ ಡಿಶ್ ಮಂಜುನಾಥ್, ಈಕೆ ಕೃಷ್ಣಮೂರ್ತಿ, ಡಿಶ್ ವೆಂಕಟೇಶ್, ಗುಂಡ್ಲು ಹನುಮಂತಪ್ಪ, ಕೆಜಿಎನ್ ಅಲ್ಲಾಭಕ್ಷಿ, ಅರಸೀಕೆರೆ ಹನುಮಂತಪ್ಪ, ದಾದಮ್ಮನವರ ಬಸವರಾಜ್, ಬಂಗಾರಿ ಗಾಳಿರಾಜ್, ಸರ್ದಾರ್ ಯಮನೂರಪ್ಪ, ಚಿಗರಿ ಮಾರುತಿ, ಸರ್ದಾರ್ ಅಂಬಣ್ಣ, ವಲ್ಲಬಪುರ ಹೇಮೇಶ್, ಬಾಬು ಪೇಂಟರ್, ಕರೀಂ ಸಾಬ್ ಬಲ್ಲಹುಣಿಸಿ, ಕಾಟರ್ ಗಾಳಪ್ಪ, ದಾದಮ್ಮನವರ ರಾಜಪ್ಪ, ಸೋಮು ಗಾಂಧಿ, ಮಹಮ್ಮದ್ ಮೂಸಾ, ಮೂಲಿಮನಿ ರಫಿ, ಉಪ್ಪಾರ್ ಹನುಮಂತಪ್ಪ, ಮಡಿವಾಳರ ಹನುಮೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.




# ವೀರಪ್ಪ ಸಿದ್ದನಗೌಡರಿಗೆ "ಸೇವಾ ಸ್ಫೂರ್ತಿ" ರಾಜ್ಯ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ವಿಜಯ ಕರ್ನಾಟಕ ಪತ್ರಿಕೆಯ ವರದಿಗಾರ ಹಾಗೂ ಮುಳಗುಂದ ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರ ಎಸ್‌ಡಿಎಂಸಿ ಅಧ್ಯಕ್ಷ ವೀರಪ್ಪ ಸಿದ್ದನಗೌಡರಿಗೆ "ಸೇವಾ ಸ್ಫೂರ್ತಿ" ರಾಜ್ಯ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ. ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಾಂಸ್ಕೃತಿಕ ಮತ್ತು ಸಾಹಿತ್ಯಕ ಪರಿಷತ್ತು, ಭಾರತ ಜ್ಞಾನ ವಿಜ್ಞಾನ ಸಮಿತಿ ಹಾಗೂ ಪರಿಸರ ಪ್ರೇಮ ತಂಡದ ಸಂಯುಕ್ತ ಆಶ್ರಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಈ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಸಾಮಾಜಿಕ ಸೇವೆ ಹಾಗೂ ಎಸ್‌ಡಿಎಂಸಿ ಅಧ್ಯಕ್ಷರಾಗಿ ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಕಾರ್ಯಕ್ರಮದಲ್ಲಿ ಧಾರವಾಡ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಕರ್ನಾಟಕ ವಿದ್ಯಾವರ್ಧಕ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ, ಅಖಿಲ ಭಾರತ ಶಿಕ್ಷಕರ ಸಂಘದ ರಾಷ್ಟ್ರೀಯ ಅಧ್ಯಕ್ಷ ಬಸವರಾಜ ಗುರಿಕಾರ, ಭಾರತ ಜ್ಞಾನ ವಿಜ್ಞಾನ ಸಮಿತಿಯ ರಾಜ್ಯ ಉಪಾಧ್ಯಕ್ಷ ಎಫ್.ಸಿ. ಚೇಗರೆಡ್ಡಿ, ಜಿಲ್ಲಾಧ್ಯಕ್ಷ ಗುರು ತಿಗಡಿ, ಪರಿಸರ ಪ್ರೇಮ ತಂಡದ ಸಂಚಾಲಕ ಎಲ್.ಐ. ಲಕ್ಕಮ್ಮನವರ, ಪರಿಷತ್ತಿನ ರಾಜ್ಯ ಅಧ್ಯಕ್ಷೆ ರಮಾ ಆರ್, ಪ್ರಧಾನ ಕಾರ್ಯದರ್ಶಿ ಪರ್ವೀನ್ ಬಾನು ಬುಳ್ಳಣ್ಣವರ, ಕೋಶಾಧ್ಯಕ್ಷ ಎಂ.ಆರ್. ಮಲ್ಲಿಕಾರ್ಜುನ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಸಮುದಾಯಗಳನ್ನು ಒಗ್ಗೂಡಿಸುವ ಶಕ್ತಿ ಕ್ರೀಡೆಗಿದೆ

**ನರೇಗಲ್‌ನಲ್ಲಿ 'ಸಾವಿರ ಕೆರೆಗಳ ಸರದಾರ ಟ್ರೋಫಿ-2026' ಕ್ರಿಕೆಟ್ ಪಂದ್ಯಾವಳಿಗೆ ಶಾಸಕ ಜಿ.ಎಸ್. ಪಾಟೀಲ ಚಾಲನೆ**



> "ಕ್ರೀಡೆ ಜಾತ್ಯಾತೀತ ಮನೋಭಾವ ಬೆಳೆಸಿ ಸಮುದಾಯಗಳನ್ನು ಒಗ್ಗೂಡಿಸುವ ಶಕ್ತಿ ಹೊಂದಿದೆ."
> – ಜಿ.ಎಸ್. ಪಾಟೀಲ, ಶಾಸಕ.



■ **ವಿಜಯಸಾಕ್ಷಿ ಸುದ್ದಿ, ನರೇಗಲ್**

ಕ್ರೀಡೆ ಕೇವಲ ಆಟವಲ್ಲ, ಜಾತ್ಯಾತೀತ ಮನೋಭಾವ ಬೆಳೆಸಿ ಸಮುದಾಯಗಳ ನಡುವೆ ಸೌಹಾರ್ದತೆ ಹೆಚ್ಚಿಸುವ ಶಕ್ತಿ ಹೊಂದಿದೆ ಎಂದು ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಪಟ್ಟಣದ 3ನೇ ವಾರ್ಡ್ ಆಶ್ರಯ ಕಾಲೋನಿ ಹಾಗೂ ಬುಲ್ಡೋಜರ್ ನಗರ ಆಶ್ರಯದಲ್ಲಿ, ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಂಡಿದ್ದ 'ಸಾವಿರ ಕೆರೆಗಳ ಸರದಾರ ಟ್ರೋಫಿ-2026' 7 ಸೈಡ್ ಹಾರ್ಡ್ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿಗೆ ಬುಧವಾರ ಸಂಜೆ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರಿಕೆಟ್ ಆಟದ ರೂಪಾಂತರ ಕುರಿತು ಮಾತನಾಡಿದ ಅವರು, ಟೆಸ್ಟ್ ಪಂದ್ಯದಿಂದ 50 ಓವರ್ ಹಾಗೂ ಇದೀಗ ಟಿ-20 ಪಂದ್ಯಾವಳಿ ವರೆಗೆ ಆಟದಲ್ಲಿ ಬದಲಾವಣೆ ಕಂಡು ಬಂದಿದೆ. ಅದೇ ರೀತಿ ಗ್ರಾಮೀಣ ಭಾಗದಲ್ಲಿ 7, 6, 8 ಸೈಡ್ ಪಂದ್ಯಾವಳಿಗಳು ಜನಪ್ರಿಯವಾಗುತ್ತಿವೆ.

ಕಡಿಮೆ ಅವಧಿಯಲ್ಲಿ ಹೆಚ್ಚು ಮನರಂಜನೆ ನೀಡುವ ಪಂದ್ಯಾವಳಿಗಳು ಈಗಿನ ಟ್ರೆಂಡ್ ಆಗಿವೆ ಎಂದು ಹೇಳಿದರು.

ಯುವಕರು ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ಸೋಲಿನಿಂದ ಪಾಠ ಕಲಿತು ಗೆಲುವಿನತ್ತ ಸಾಗಬೇಕು ಎಂದು ಸಲಹೆ ನೀಡಿದರು.

ಆಯೋಜಕರು ಪಂದ್ಯಾವಳಿಯನ್ನು ಅಚ್ಚುಕಟ್ಟಾಗಿ ನಡೆಸಿ ಎಲ್ಲರಿಗೂ ಸಂತೋಷ ನೀಡುವಂತೆ ನೋಡಿಕೊಳ್ಳಬೇಕು ಎಂದರು.

ಇದೇ ವೇಳೆ ಎಪ್ರಿಲ್ 9 ಮತ್ತು 10ರಂದು ರೋಣದಲ್ಲಿ ಯುವಕರಿಗಾಗಿ ಉದ್ಯೋಗ ಮೇಳ ಹಾಗೂ ಮಹಿಳೆಯರಿಗಾಗಿ ಸಬಲೀಕರಣ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಾಗಿ ತಿಳಿಸಿ, ಎಲ್ಲರೂ ಭಾಗವಹಿಸುವಂತೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಆಯೋಜಕರು ಶಾಸಕರನ್ನು ಸನ್ಮಾನಿಸಿದರು. ಮುಖಂಡರಾದ ನಿಂಗನಗೌಡ ಲಕ್ಕನಗೌಡ್ರ, ಡಾ. ಕೆ.ಬಿ. ಧನ್ನೂರ, ವೀರನಗೌಡ ಪಾಟೀಲ, ಅರುಣ ಕಾಮತ, ಯೂಸೂಫ್ ಇಟಗಿ, ಬಸವರಾಜ ನವಲಗುಂದ, ಎ.ಸಿ. ಪಾಟೀಲ, ಸಂತೋಷ ಹನಮಸಾಗರ, ಕಳಕನಗೌಡ ಪೊಲೀಸ್ ಪಾಟೀಲ, ಶೇಖಪ್ಪ ಜುಟ್ಲ, ಆನಂದ ನಡುವಲಕೇರಿ, ಶೇಖಪ್ಪ ಕೆಂಗಾರ, ರಿಯಾಜ್ ಆಲೂರ, ದರ್ಶನ ಡುಮ್ಮನ್ನವರ, ಖಾದರಸಾಬ್ ಬೇಪಾರಿ, ಲಾಲಸಾಬ್ ಬೇಪಾರಿ, ಸದ್ದಾಂ ನಶೇಖಾನ್, ಶರಣಪ್ಪ ಹಂಚಿನಾಳ, ಬಿ.ಬಿ. ಮಲ್ಲನಗೌಡ್ರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಪಾದಯಾತ್ರೆ ದುರಂತ: ಸಂತ್ರಸ್ತರಿಗೆ ಶಾಸಕ ಜಿ.ಎಸ್. ಪಾಟೀಲರಿಂದ ಚೆಕ್ ವಿತರಣೆ



■ **ವಿಜಯಸಾಕ್ಷಿ ಸುದ್ದಿ, ರೋಣ**

ಕಳೆದ ವರ್ಷ ಶರದ ಹುಣ್ಣಿಮೆಯಂದು ನಡೆದ ದಾರುಣ ಅಪಘಾತದಲ್ಲಿ ಮೃತಪಟ್ಟ ತಳ್ಳಿಹಾಳ ಗ್ರಾಮದ ಮೂವರು ಭಕ್ತರ ಕುಟುಂಬಗಳಿಗೆ ಶಾಸಕ ಜಿ.ಎಸ್. ಪಾಟೀಲ ಅವರು ಸರ್ಕಾರದ ನೆರವನ್ನು ವಿತರಿಸಿದರು.

ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 2 ಲಕ್ಷ ರೂ.ಗಳ ಚೆಕ್ ಅನ್ನು ಗ್ರಾಮಕ್ಕೆ ತೆರಳಿ ಸಂತ್ರಸ್ತ ಕುಟುಂಬಸ್ಥರಿಗೆ ಹಸ್ತಾಂತರಿಸಿದರು.

ತಳ್ಳಿಹಾಳ ಗ್ರಾಮದ ಭಕ್ತರು ಪ್ರತಿವರ್ಷದಂತೆ ಹುಲಿಗೆಮ್ಮ ದೇವಿಯ ದರ್ಶನಕ್ಕಾಗಿ ಪಾದಯಾತ್ರೆಗೆ ತೆರಳುತ್ತಿದ್ದ ವೇಳೆ ಅಕ್ಟೋಬರ್ 6, 2025ರಂದು ಸಂಭವಿಸಿದ ಅಪಘಾತದಲ್ಲಿ ಅನ್ನಪೂರ್ಣ ಮ್ಯಾಗೇರಿ, ಶರಣಪ್ಪ ಮ್ಯಾಗೇರಿ ಮತ್ತು ಪ್ರಕಾಶ ಮಾಡಲಗೇರಿ ಸ್ಥಳದಲ್ಲೇ ಸಾವನ್ನಪ್ಪಿದ್ದರು. ಈ ದುರ್ಘಟನೆ ಇಡೀ ಗ್ರಾಮವನ್ನು ಶೋಕಸಾಗರದಲ್ಲಿ ಮುಳುಗಿಸಿತ್ತು.

ಅಂದು ನಡೆದ ಘಟನೆಯ ನಂತರ ಗ್ರಾಮಕ್ಕೆ ಭೇಟಿ ನೀಡಿದ್ದ ಶಾಸಕ ಜಿ.ಎಸ್. ಪಾಟೀಲ ಅವರು ಮೃತರ ಕುಟುಂಬಗಳಿಗೆ ಧೈರ್ಯ ತುಂಬಿ ಸರ್ಕಾರದಿಂದ ನೆರವು ಒದಗಿಸುವ ಭರವಸೆ ನೀಡಿದ್ದರು. ಈಗ ಆ ಭರವಸೆಯನ್ನು ಈಡೇರಿಸಿ, ಸಂತ್ರಸ್ತ ಕುಟುಂಬಗಳಿಗೆ ಪರಿಹಾರ ವಿತರಿಸಿದ್ದಾರೆ.

ಈ ಸಂದರ್ಭದಲ್ಲಿ ಐ.ಎಸ್. ಪಾಟೀಲ, ಯೂಸುಫ್ ಇಟಗಿ, ಯಚ್ಚರಗೌಡ ಗೋವಿಂದಗೌಡ್ರ, ಸೋಮು ನಾಗರಾಜ, ಅಭಿಷೇಕ ನವಲಗುಂದ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

## ರಕ್ತದಾನದಿಂದ ಮತ್ತೊಂದು ಜೀವ ಉಳಿಸಿದ ತೃಪ್ತಿ ಸಿಗುತ್ತದೆ

**ಅಂಬೇಡ್ಕರ್ ಹಾಗೂ ಬಾಬು ಜಗಜೀವನ ರಾಮ್ ಜಯಂತಿ ಅಂಗವಾಗಿ ರಕ್ತದಾನ ಶಿಬಿರ**

■ **ವಿಜಯಸಾಕ್ಷಿ ಸುದ್ದಿ, ಗದಗ**

ರಕ್ತದಾನವು ಶ್ರೇಷ್ಠ ದಾನವಾಗಿದ್ದು, ತುರ್ತು ಪರಿಸ್ಥಿತಿ, ಅಪಘಾತಗಳು ಹಾಗೂ ಶಸ್ತ್ರಚಿಕಿತ್ಸೆಗಳ ಸಂದರ್ಭಗಳಲ್ಲಿ ಮತ್ತೊಂದು ಜೀವ ಉಳಿಸಲು ನೆರವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ನಗರಸಭೆ ಗದಗ-ಬೆಟಗೇರಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಹಯೋಗದಲ್ಲಿ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಹಾಗೂ ಡಾ. ಬಾಬು ಜಗಜೀವನ ರಾಮ್ ಅವರ 119ನೇ ಜಯಂತಿ ಅಂಗವಾಗಿ ಜಿಲ್ಲಾಡಳಿತ ಭವನದಲ್ಲಿ ಆಯೋಜಿಸಿದ ರಕ್ತದಾನ ಶಿಬಿರದಲ್ಲಿ ಅವರು ಮಾತನಾಡಿದರು.

ರಕ್ತದಾನ ಮಾಡುವುದರಿಂದ ಮತ್ತೊಂದು ಜೀವ ಉಳಿಸಿದ ಸಂತೃಪ್ತಿ ಹಾಗೂ ಮಾನಸಿಕ



> "ರಕ್ತದಾನವು ಶ್ರೇಷ್ಠ ದಾನ; ಮತ್ತೊಂದು ಜೀವ ಉಳಿಸುವ ತೃಪ್ತಿ ನೀಡುತ್ತದೆ."
> – ಸಿ.ಎನ್. ಶ್ರೀಧರ್, ಜಿಲ್ಲಾಧಿಕಾರಿ.

ಶಾಂತಿ ದೊರೆಯುತ್ತದೆ. ಇದರಿಂದ ದೇಹದಲ್ಲಿ ಹೊಸ ರಕ್ತಕಣಗಳ ಉತ್ಪಾದನೆಯೂ ಹೆಚ್ಚುತ್ತದೆ ಎಂದು ಅವರು ಹೇಳಿದರು.ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ ಮಾತನಾಡಿ, ರಕ್ತದಾನವು ಮಹಾದಾನವಾಗಿದ್ದು, ಈ ರೀತಿಯ ಶಿಬಿರಗಳು ಸಮಾಜಕ್ಕೆ ಅತ್ಯಂತ ಉಪಯುಕ್ತವಾಗಿವೆ ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ತಹಸೀಲ್ದಾರ್ ಶ್ರೀನಿವಾಸ ಮೂರ್ತಿ ಕುಲಕರ್ಣಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಡಿಡಿಪಿಐ ಆರ್. ಎಸ್. ಬುರುಡಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಹೋಟೆಲ್ ಒಡೆಯರ ಸಂಘದ ನೂತನ ಕಟ್ಟಡ ಉದ್ಘಾಟನೆ ನಾಳೆ

▸▸ ಮೊದಲನೇ ಪುಟದಿಂದ

ಸುಮಾರು 45 ವರ್ಷಗಳ ಹಿಂದೆ ಸ್ಥಾಪನೆಯಾದ ಹೋಟೆಲ್ ಒಡೆಯರ ಸಂಘವು ಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸುತ್ತ ಬಂದಿದ್ದು, ಇದೀಗ ಸ್ವಂತ ಕಟ್ಟಡ ನಿರ್ಮಾಣವಾಗಿರುವುದು ಸಂಘದ ಹೆಮ್ಮೆಯ ವಿಷಯವಾಗಿದೆ ಎಂದು ಅವರು ಹೇಳಿದರು. ಕಟ್ಟಡ ನಿರ್ಮಾಣಕ್ಕೆ ಸಹಕರಿಸಿದ ಎಲ್ಲರನ್ನು ಈ ಸಂದರ್ಭದಲ್ಲಿ ಸ್ಮರಿಸಿದರು.

ಈ ವೇಳೆ ಸಂಘದ ಪದಾಧಿಕಾರಿಗಳಾದ ಶಾನುಭಾಗ್, ಜಯದೇವ ಭಟ್, ದಿವಾಕರ್ ಶೆಟ್ಟಿ, ಪುರುಷೋತ್ತಮ್, ಜಯಪಾಲ್ ಶೆಟ್ಟಿ, ಸುಧಾಕರ ಶೆಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಾಜ್ಯದಲ್ಲಿ ಆಟೋ ಗ್ಯಾಸ್ ಕೊರತೆ ಇಲ್ಲ

**ಬಂಕ್‌ಗಳ ಮುಂದೆ ಸಾಲು ನಿಲ್ಲುವ ಅಗತ್ಯವಿಲ್ಲ; ಪೂರೈಕೆ ಹೆಚ್ಚಿಸಲಾಗಿದೆ ಎಂದು ಸರ್ಕಾರ ಸ್ಪಷ್ಟನೆ**

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯದ ವಿವಿಧ ಆಟೋ ಗ್ಯಾಸ್ ಬಂಕ್‌ಗಳಲ್ಲಿ ಅನಿಲದ ದಾಸ್ತಾನು ಕೊರತೆ ಇದೆ ಎಂಬ ತಪ್ಪು ಮಾಹಿತಿಯ ಹಿನ್ನೆಲೆಯಲ್ಲಿ, ಕಳೆದ ಕೆಲವು ದಿನಗಳಿಂದ ಆಟೋ ಮಾಲೀಕರು ಹಾಗೂ ಚಾಲಕರು ಬಂಕ್‌ಗಳ ಮುಂದೆ ದೀರ್ಘ ಸಾಲಿನಲ್ಲಿ ನಿಲ್ಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. ಈ ಬಗ್ಗೆ ಕೆಲವು ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿರುವ ವರದಿಗಳು ಕೇವಲ ವದಂತಿಗಳಾಗಿದ್ದು, ಸಾರ್ವಜನಿಕರು ಆತಂಕಪಡುವ ಅಗತ್ಯವಿಲ್ಲ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸ್ಪಷ್ಟಪಡಿಸಿದೆ.

ಕೆಲವು ಖಾಸಗಿ ಸರಬರಾಜು ಸಂಸ್ಥೆಗಳಲ್ಲಿ ಮಾತ್ರ ಅಲ್ಪ ಪ್ರಮಾಣದ ಕೊರತೆ ಕಂಡು ಬಂದಿದ್ದು, ಅದನ್ನು ಸರಿಪಡಿಸಲು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳಾದ ಇಂಡಿಯನ್ ಆಯಿಲ್ (IOC), ಭಾರತ್ ಪೆಟ್ರೋಲಿಯಂ (BPC) ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ (HPC) ಮೂಲಕ ಹೆಚ್ಚುವರಿ ಅನಿಲ ಪೂರೈಕೆ ಮಾಡಲಾಗುತ್ತಿದೆ.

ಹಿಂದೆ ಸರಾಸರಿ 56.67 ಮೆಟ್ರಿಕ್ ಟನ್ ಆಟೋ ಗ್ಯಾಸ್ ಪೂರೈಕೆ ಮಾಡಲಾಗುತ್ತಿದ್ದರೆ, ಪ್ರಸ್ತುತ ಬೇಡಿಕೆಗೆ ಅನುಗುಣವಾಗಿ ದಿನಕ್ಕೆ ಸರಾಸರಿ 83.58 ಮೆಟ್ರಿಕ್ ಟನ್‌ಗೆ ಹೆಚ್ಚಿಸಲಾಗಿದೆ.

ಎಪ್ರಿಲ್ 2ರಿಂದ 6ರವರೆಗೆ ಪೂರೈಕೆ ಅಂಕಿಅಂಶಗಳ ಪ್ರಕಾರ, ಎಪ್ರಿಲ್ 2ರಂದು 87.78 ಮೆಟ್ರಿಕ್ ಟನ್, ಎಪ್ರಿಲ್ 3ರಂದು 86.05 ಮೆಟ್ರಿಕ್ ಟನ್, ಎಪ್ರಿಲ್ 4ರಂದು 84.80 ಮೆಟ್ರಿಕ್ ಟನ್, ಎಪ್ರಿಲ್ 5ರಂದು 94.11 ಮೆಟ್ರಿಕ್ ಟನ್ ಹಾಗೂ ಎಪ್ರಿಲ್ 6ರಂದು 83.58 ಮೆಟ್ರಿಕ್ ಟನ್ ಅನಿಲ ಪೂರೈಕೆ ಮಾಡಲಾಗಿದೆ.

ಆದ್ದರಿಂದ ಆಟೋ ಮಾಲೀಕರು ಮತ್ತು ಚಾಲಕರು ಸುಳ್ಳು ವದಂತಿಗಳಿಗೆ ಕಿವಿಗೊಡದೇ, ಅನಾವಶ್ಯಕವಾಗಿ ಬಂಕ್‌ಗಳ ಮುಂದೆ ಸಾಲಿನಲ್ಲಿ ನಿಲ್ಲಬಾರದು ಎಂದು ಸರ್ಕಾರ ಮನವಿ ಮಾಡಿದೆ. ಅನಿಲ ಪೂರೈಕೆ ಸಮರ್ಪಕವಾಗಿ ನಡೆಯುತ್ತಿದ್ದು, ಸಾರ್ವಜನಿಕರು ಸಹಕರಿಸಬೇಕೆಂದು ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

## ಆಟೋ ಚಾಲಕರ ನೆರವಿಗೆ ಸರ್ಕಾರ ಧಾವಿಸಬೇಕು

**ಯುದ್ಧದ ಪರಿಣಾಮ ಸಂಕಷ್ಟಕ್ಕೆ ಸಿಲುಕಿದ ಚಾಲಕರು; ದಿನಸಿ ಕಿಟ್ ವಿತರಿಸಿದ ವೆಂಕನಗೌಡ ಗೋವಿಂದಗೌಡ್ರ**



■ **ವಿಜಯಸಾಕ್ಷಿ ಸುದ್ದಿ, ಗದಗ**

ಯುದ್ಧದ ಪರಿಣಾಮ ಆಟೋ ಚಾಲಕರ ಪರಿಸ್ಥಿತಿ ಕಷ್ಟಕರವಾಗಿದ್ದು, ಅವರ ನೆರವಿಗೆ ರಾಜ್ಯ ಸರ್ಕಾರ ತಕ್ಷಣ ಧಾವಿಸಬೇಕು ಎಂದು ಯಂಗ್ ಇಂಡಿಯಾ ಪರಿವಾರದ ಸಂಸ್ಥಾಪಕ ಅಧ್ಯಕ್ಷ ವೆಂಕನಗೌಡ ಗೋವಿಂದಗೌಡ್ರ ಆಗ್ರಹಿಸಿದರು.

ನಗರದ ಪ್ರಥಮ ಮಹಿಳಾ ಆಟೋ ಚಾಲಕಿ ಶ್ರೀಮತಿ ರೇಖಾ ಹಳ್ಳೂರ ಅವರ ನಿವಾಸಕ್ಕೆ ಭೇಟಿ ನೀಡಿ, ಅವರಿಗೆ ಎರಡು ತಿಂಗಳ ದಿನಸಿ ಕಿಟ್ ವಿತರಿಸಿ ಮಾತನಾಡಿದ ಅವರು, ಆಟೋ ಚಾಲಕರು ಬ್ಯಾಂಕ್ ಸಾಲದ ಕಂತುಗಳು ಹಾಗೂ ವಾಹನದ ದುರಸ್ತಿ ವೆಚ್ಚಗಳನ್ನು ನಿರ್ವಹಿಸಲು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು. ಯುದ್ಧದ ಪರಿಸ್ಥಿತಿ ಮುಂದುವರಿಯುವವರೆಗೆ ಆಟೋ ಚಾಲಕರಿಗೆ ಪ್ರತಿ ತಿಂಗಳು 15,000 ಗೌರವ ಧನ ನೀಡಬೇಕು ಅಥವಾ ಪೆಟ್ರೋಲ್ ಬಳಕೆಗೆ ಅವಕಾಶ ನೀಡಿ, ಅದಕ್ಕೆ ಸರ್ಕಾರದಿಂದ ಸಬ್ಸಿಡಿ ನೀಡಬೇಕು ಎಂದು ಅವರು ಮನವಿ ಮಾಡಿದರು.

ಪೆಟ್ರೋಲ್ ಬಳಕೆಯಲ್ಲಿ ಮೈಲೇಜ್ ಕಡಿಮೆಯಾಗುವ ಹಿನ್ನೆಲೆ, ಪ್ರತಿದಿನ ಕನಿಷ್ಠ 3 ಲೀಟರ್ ಪೆಟ್ರೋಲ್‌ಗೆ ಸಬ್ಸಿಡಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ಅವರು ಆಗ್ರಹಿಸಿದರು. ಈ ಸಂದರ್ಭದಲ್ಲಿ ರವಿ ಕರಬಸಣ್ಣವರ, ಅಮರೇಶ್ ಅಂಗಡಿ, ಯಲ್ಲಪ್ಪ ಹೊಂಬಾಳ, ಕುಮಾರ್ ಜಗಳೂರು, ಮಂಜುನಾಥ್ ಮಟ್ಟಿ, ಚಂದ್ರುಗೌಡ ಸಂಕನಗೌಡ್ರ, ಈಶ್ವರ್ ಗುಡಿಮನಿ, ಶ್ರೀನಿವಾಸ್ ಖೋಡೆ, ಪ್ರವೀಣ ಛಲವಾದಿ ಸೇರಿದಂತೆ ಯಂಗ್ ಇಂಡಿಯಾ ಆಟೋ ಚಾಲಕರ ಹಾಗೂ ಮಾಲಕರ ಸಂಘದ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.

## ಸ್ವಾಮೀಜಿ ವಿರುದ್ಧ ಷಡ್ಯಂತ್ರ ಆರೋಪ: ತನಿಖೆಗೆ ಆಗ್ರಹ

▸▸ ಮೊದಲನೇ ಪುಟದಿಂದ

ಘಟನೆಗಳ ಬಗ್ಗೆ ತಕ್ಷಣ ಮಾಹಿತಿ ಇಲ್ಲದ ಸರ್ಕಾರ, ಅನಾಮಧೇಯ ದೂರಿನ ಆಧಾರದ ಮೇಲೆ ತ್ವರಿತ ಕ್ರಮಕ್ಕೆ ಮುಂದಾಗುವುದು ಸಂಶಯಾಸ್ಪದ ಎಂದು ಅವರು ಪ್ರಶ್ನಿಸಿದರು.

2ಎ ಮೀಸಲಾತಿ ವಿಚಾರವಾಗಿ ನಡೆದ ಪ್ರತಿಭಟನೆ ವೇಳೆ ಲಾಠಿಚಾರ್ಜ್ ನಡೆದಿದ್ದು, ಇದನ್ನು ಖಂಡಿಸಿ ಸಮಾಜದಿಂದ ಆಕ್ರೋಶ ವ್ಯಕ್ತಪಡಿಸಲಾಗಿತ್ತು. ಇದೇ ಸಂದರ್ಭದಲ್ಲಿ ಉಪಚುನಾವಣೆಗಳ ಹಿನ್ನೆಲೆ ಜನರ ಗಮನ ಬೇರೆಡೆ ಸೆಳೆಯಲು ಈ ರೀತಿಯ ಷಡ್ಯಂತ್ರ ನಡೆಯುತ್ತಿದೆ ಎಂದು ಆರೋಪಿಸಿದರು.

ಸ್ವಾಮೀಜಿ ವಿರುದ್ಧ ಅವಹೇಳನಕಾರಿ ಬರಹ, ಆಡಿಯೊ ಹಾಗೂ ವಿಡಿಯೊಗಳನ್ನು ಹರಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಈರಣ್ಣ ಬಾಳಿಕಾಯಿ, ರಮೇಶ್ ರೋಣದ, ಮಹೇಶ್ ಆದಿ, ಕುಮಾರ ಹೊಂಬಳ, ಮಲ್ಲಿಕಾರ್ಜುನ ಕಿರೇಸೂರು, ಮಹೇಶ್ ಕರಿಬಿಷ್ಠಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನಿಧನ

### ಖಾದರಸಾಬ ಮೂಲಿಮನಿ



**ಡಂಬಳ:** ಗ್ರಾಮದ ಮುಸ್ಲಿಂ ಸಮಾಜದ ಹಿರಿಯರಾದ ಖಾದರಸಾಬ ಬುಡ್ನೆಸಾಬ ಮೂಲಿಮನಿ(84) ಬುಧವಾರ ನಿಧನರಾದರು. ನಾಲ್ವರು ಪುತ್ರರು, ಓರ್ವ ಪುತ್ರಿ, ಅಳಿಯ, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗ ಅಗಲಿದ್ದಾರೆ.

**ಸಂತಾಪ:** ಶಾಸಕ ಜಿ.ಎಸ್.ಪಾಟೀಲ, ಯುಸೂಫ್ ಈಟಿ, ವಿ.ಟಿ.ಮೇಟಿ, ಬಿ.ಎಸ್.ಬಂಡಿ, ಹುಸೇನಸಾಬ ಮೂಲಿಮನಿ, ಮಹೇಶ ಗಡಗಿ, ಬಸುವರಡ್ಡಿ ಬಂಡಿಹಾಳ, ಜಿ.ಎಸ್.ಕೊರ್ಲಹಳ್ಳಿ, ಕೆ.ಕೆ.ಬಂಡಿ, ಬಶೀರ ಅಹಮ್ಮದ ತಾಂಬೋಟಿ, ಸಿದ್ದಪ್ಪ ನಂಜಪ್ಪನವರ, ಮಲ್ಲಿಕಾರ್ಜುನ ಪ್ಯಾಟಿ, ಖಾಜಾಹುಸೇನ ಹೊಸಪೇಟಿ, ಬಾಬುಸಾಬ ಸರಕವಾಸ, ಮರಿಯಪ್ಪ ಸಿದ್ದಣ್ಣವರ, ಗೌಸಿದ್ದಪ್ಪ ಬಿಸನಳ್ಳಿ, ನಿಂಗಪ್ಪ ಮಾದರ, ಬುಡ್ನೆಸಾಬ ಅತ್ತಾರ, ಕುಬೇರಪ್ಪ ಕೊಳ್ಳಾರ, ಮಂಜಪ್ಪ ಬೇವನಮರದ ಸುತ್ತಮುತ್ತಲಿನ ಗ್ರಾಮದ ಹಿರಿಯರು ಸಂತಾಪ ಸೂಚಿಸಿದ್ದಾರೆ.

## ಮನೆ ಮುಂದೆ ಮಲಗಿದ್ದವರ ಮೇಲೆ ದೊಣ್ಣೆಯಿಂದ ಹಲ್ಲೆ

■ **ವಿಜಯಸಾಕ್ಷಿ ಸುದ್ದಿ, ಡಂಬಳ**

ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಡೋಣಿ ತಾಂಡಾದಲ್ಲಿ ಮಂಗಳವಾರ ಮಧ್ಯರಾತ್ರಿ ಮಾನಸಿಕ ಅಸ್ವಸ್ಥನೊಬ್ಬ ಮನೆ ಮುಂದೆ ಮಲಗಿದ್ದವರ ಮೇಲೆ ದೊಣ್ಣೆಯಿಂದ ಹಲ್ಲೆ ನಡೆಸಿದ ಘಟನೆ ನಡೆದಿದೆ. ದಾಳಿಯಲ್ಲಿ ಆರು ಜನರಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಹರ್ಜಪ್ಪ ಲಮಾಣಿ (44) ಹಲ್ಲೆ ನಡೆಸಿದ ಆರೋಪಿಯಾಗಿದ್ದು, ಬೇಸಿಗೆ ಹಿನ್ನೆಲೆಯಲ್ಲಿ ಮನೆ ಮುಂದೆ ಮಲಗಿದ್ದವರ ಮೇಲೆ ರಾತ್ರಿ ಸುಮಾರು 1 ಗಂಟೆ ವೇಳೆಗೆ ಏಕಾಏಕಿ ದಾಳಿ ನಡೆಸಿದ್ದಾನೆ. ದೊಣ್ಣೆಯಿಂದ ಏಳೆಂಟು ಜನರ ಮೇಲೆ ಎರಗಿ ಮಾರಣಾಂತಿಕ ಹಲ್ಲೆ ನಡೆಸಿದ್ದಾನೆ ಎನ್ನಲಾಗಿದೆ.

ಈ ದಾಳಿಯಲ್ಲಿ ಎಗ್ಗಪ್ಪ ಭಜನೆನಾಯಕ, ಶೇಖಪ್ಪ ನಾಯಕ್, ದೇವಕ್ಕ ನಾಯಕ್, ಷಣ್ಮುಖಪ್ಪ ರಾಠೋಡ, ಜಗದೀಶ್ ಲಮಾಣಿ



ಹಾಗೂ ಚವಳ್ಳವ್ವ ಲಮಾಣಿ ಗಾಯಗೊಂಡಿದ್ದಾರೆ. ಗಾಯಾಳುಗಳ ತಲೆ, ಕಣ್ಣು ಮತ್ತು ಮುಖ ಭಾಗಗಳಿಗೆ ಗಂಭೀರ ಗಾಯಗಳಾಗಿವೆ.

ಗಾಯಾಳುಗಳ ಕೂಗಾಟ ಕೇಳಿ ಸ್ಥಳೀಯರು ಧಾವಿಸಿ ಅವರನ್ನು ತಕ್ಷಣ ಸ್ಥಳೀಯ ಆಸ್ಪತ್ರೆಗೆ ಸಾಗಿಸಿ, ಬಳಿಕ ಹೆಚ್ಚಿನ ಚಿಕಿತ್ಸೆಗೆ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿದರು. ಕೆಲವು ಗಾಯಾಳುಗಳನ್ನು ಖಾಸಗಿ ಆಸ್ಪತ್ರೆಗೆ ವರ್ಗಾಯಿಸಲಾಗಿದೆ.

ಹಲ್ಲೆ ನಡೆಸಿದ ಆರೋಪಿಯಾದ ಹರ್ಜಪ್ಪ ಲಮಾಣಿಯನ್ನು ಕೂಡ ಜಿಮ್ಸ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಈ ನಡುವೆ ಆರೋಪಿಯ ಚಲನವಲನಗಳು ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿವೆ.

ಈ ಕುರಿತು ಮುಂಡರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

## ಉಪಚುನಾವಣೆ ಫಲಿತಾಂಶವೇ 2028 ಬಿಜೆಪಿ ಗೆಲುವಿನ ಮುನ್ನುಡಿ – ಸಂತೋಷ ಅಕ್ಕಿ



■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 9ರಂದು ನಡೆಯಲಿರುವ ಬಾಗಲಕೋಟೆ, ದಾವಣಗೆರೆ ದಕ್ಷಿಣ ಸೇರಿದಂತೆ ವಿವಿಧ ರಾಜ್ಯಗಳ ಉಪಚುನಾವಣೆಗಳು 2028ರ ಕರ್ನಾಟಕ ವಿಧಾನಸಭಾ ಚುನಾವಣೆಗೆ ದಿಕ್ಸೂಚಿಯಾಗಲಿವೆ ಎಂದು ಗದಗ ಜಿಲ್ಲಾ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ ಹೇಳಿದ್ದಾರೆ.

ಮತದಾರರು ಬಿಜೆಪಿಗೆ ಬೆಂಬಲ ನೀಡುವಂತೆ ಮನವಿ ಮಾಡಿದ ಅವರು, ಈ ಉಪಚುನಾವಣೆಗಳು 'ಅಭಿವೃದ್ಧಿ' ಮತ್ತು ವಿರೋಧ ಪಕ್ಷ ಆಡಳಿತದ ರಾಜ್ಯಗಳಲ್ಲಿ ಕಾಣಿಸುತ್ತಿರುವ 'ಅರಾಜಕತೆ' ನಡುವಿನ ನಿರ್ಣಾಯಕ ಹೋರಾಟವೆಂದು ಬಣ್ಣಿಸಿದರು.

"ವಿಕಸಿತ ಭಾರತ–2047" ಗುರಿ ಸಾಧನೆಗೆ ಇದು ಅಡಿಪಾಯದ ಹೆಜ್ಜೆಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಪಶ್ಚಿಮ ಬಂಗಾಳದಂತಹ ರಾಜ್ಯಗಳಲ್ಲಿ ಕಾನೂನು ಸುವ್ಯವಸ್ಥೆ ಕುಸಿತವನ್ನು ಟೀಕಿಸಿದ ಅವರು, ಉತ್ತರ ಪ್ರದೇಶ ಮತ್ತು ಅಸ್ಸಾಂ ರಾಜ್ಯಗಳನ್ನು ಅಪರಾಧರಹಿತ ಆಡಳಿತದ ಮಾದರಿಗಳೆಂದು ಉಲ್ಲೇಖಿಸಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಡಬಲ್ ಇಂಜಿನ್ ಸರ್ಕಾರದಡಿ ಆಯುಷ್ಮಾನ್ ಭಾರತ್, ಜಲ ಜೀವನ್ ಮಿಷನ್, ಕಿಸಾನ್ ಸಮ್ಮಾನ್ ನಿಧಿ ಯೋಜನೆಗಳು ಜನತೆಗೆ ತಲುಪುತ್ತಿವೆ ಎಂದು ಹೇಳಿದರು.

ರಾಜ್ಯದ ಪ್ರಸ್ತುತ ಸರ್ಕಾರದ ವಿರುದ್ಧ ತೀವ್ರ ಟೀಕೆ ವ್ಯಕ್ತಪಡಿಸಿದ ಸಂತೋಷ ಅಕ್ಕಿ, ಗ್ಯಾರಂಟಿ ಯೋಜನೆಗಳಿಂದ ಖಜಾನೆ ಬರಿದಾಗಿದೆ, ಮೂಲಸೌಕರ್ಯ ಅಭಿವೃದ್ಧಿ ಕುಂಠಿತವಾಗಿದೆ ಹಾಗೂ ಭ್ರಷ್ಟಾಚಾರ ಮಿತಿಮೀರಿದೆ ಎಂದು ಆರೋಪಿಸಿದರು. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಆಡಳಿತ ಪಕ್ಷದೊಳಗಿನ ಅಸಮಾಧಾನವೇ ಸರ್ಕಾರದ ವೈಫಲ್ಯಕ್ಕೆ ಸಾಕ್ಷಿ ಎಂದರು.

"ಬಾಗಲಕೋಟೆ ಗೆಲುವು ಉತ್ತರ ಕರ್ನಾಟಕದಲ್ಲಿ ಬಿಜೆಪಿ ಅಲೆಯನ್ನು ಬಲಪಡಿಸುತ್ತದೆ. ದಾವಣಗೆರೆ ದಕ್ಷಿಣದಲ್ಲಿ ಜಯ ಸಾಧಿಸಿದರೆ ಮಧ್ಯ ಕರ್ನಾಟಕದಲ್ಲಿ ಪಕ್ಷದ ಪ್ರಭಾವ ಪುನಃ ಸ್ಥಾಪನೆ ಆಗಲಿದೆ. ಈ ಗೆಲುವು 2028ರಲ್ಲಿ ಬಿಜೆಪಿ ಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಮರಳಲು ನೈತಿಕ ಬಲ ನೀಡಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು. "ಭಾರತ 2047ರ ಶಿಲ್ಪಿಗಳು ಬಿಜೆಪಿ. ಭದ್ರತೆ, ಅಭಿವೃದ್ಧಿ ಮತ್ತು ಉಜ್ವಲ ಭವಿಷ್ಯಕ್ಕಾಗಿ ಕಮಲವೇ ಆಯ್ಕೆ" ಎಂದು ಅವರು ಕರೆ ನೀಡಿದರು.

### ಮಧ್ಯ ಪ್ರಾಚ್ಯದ ಯುದ್ಧ ಪರಿಸ್ಥಿತಿ ಶಮನವಾಗಲಿ– ವಿಶ್ವದಲ್ಲಿ ಶಾಂತಿ, ನೆಮ್ಮದಿ ನೆಲೆಸಲೆಂಬ ಆಶಯ

# ವಿಶ್ವಶಾಂತಿಗಾಗಿ ಎರೆಶಿಗಮ್ಮ ಸನ್ನಿಧಿಯಲ್ಲಿ ಭಕ್ತರ ವಿಶೇಷ ಪೂಜೆ



ಇವತ್ತು ಇಡೀ ವಿಶ್ವ ಒಂದಿಲ್ಲ ಒಂದು ತೊಂದರೆಯನ್ನು ಎದುರಿಸುತ್ತಿರುವ ಬೆಳವಣಿಗೆಗಳನ್ನು ಕಾಣುತ್ತಿದ್ದೇವೆ. ಮಧ್ಯ ಪ್ರಾಚ್ಯ ದೇಶಗಳು ಯುದ್ಧದ ಭೀತಿಯನ್ನು ಎದುರಿಸುತ್ತಿವೆ. ಮಾನವ ಕುಲ ತೀವ್ರ ಸಂಕಷ್ಟದ ಸ್ಥಿತಿಯಲ್ಲಿದ್ದು, ಇವುಗಳೆಲ್ಲ ದೂರವಾಗಿ ಇಡೀ ವಿಶ್ವ ಶಾಂತಿ ಮತ್ತು ನೆಮ್ಮದಿಯ ಬದುಕನ್ನು ಕಟ್ಟಿಕೊಳ್ಳಬೇಕು ಎಂಬ ಮಹತ್ತರ ಉದ್ದೇಶದಿಂದ ಎರೆಶಿಗಮ್ಮ ದೇವಿಯ ಸನ್ನಿಧಿಯಲ್ಲಿ ವಿಶೇಷ ಪೂಜಾ ಕಾರ್ಯವನ್ನು ನಡೆಸಿದ್ದು, ದೇವಿಯ ಶಕ್ತಿಯಿಂದ ಎಲ್ಲದಕ್ಕೂ ಒಳ್ಳೆಯದಾಗಲಿದೆ.

– ಜಿ.ಎಸ್. ಪಾಟೀಲ, ಶಾಸಕರು.

■ವಿಜಯಸಾಕ್ಷಿ ಸುದ್ದಿ, ರೋಣ

ಮಧ್ಯ ಪ್ರಾಚ್ಯದಲ್ಲಿ ಉಲ್ಬಣಗೊಂಡಿರುವ ಯುದ್ಧ ಪರಿಸ್ಥಿತಿ ಶಮನವಾಗಲಿ, ವಿಶ್ವದಾದ್ಯಂತ ಶಾಂತಿ ಮತ್ತು ನೆಮ್ಮದಿ ನೆಲೆಸಲಿ ಎಂಬ ಮಹತ್ತರ ಸಂಕಲ್ಪದೊಂದಿಗೆ ರೋಣ ತಾಲೂಕಿನ ಸವಡಿ ಗ್ರಾಮದ ಪ್ರಸಿದ್ಧ ಎರೆಶಿಗಮ್ಮ ದೇವಿಯ ಸನ್ನಿಧಿಯಲ್ಲಿ ಭಕ್ತರು ಭವ್ಯ ಹೋಮ–ಹವನ ಹಾಗೂ ವಿಶೇಷ ಪೂಜೆಗಳನ್ನು ನೆರವೇರಿಸಿದರು.

ತಾಲೂಕು ಮಾತ್ರವಲ್ಲದೆ ವಿವಿಧ ಜಿಲ್ಲೆಗಳು ಹಾಗೂ ಹೊರ ರಾಜ್ಯಗಳಲ್ಲಿಯೂ ಅಪಾರ ಭಕ್ತರನ್ನು ಹೊಂದಿರುವ ಎರೆಶಿಗಮ್ಮ ದೇವಿ, ಸಾವಿರಾರು ಭಕ್ತರಿಗೆ ಶಕ್ತಿದಾಯಕ ಆರಾಧ್ಯ ದೇವತೆಯಾಗಿದ್ದು, ವಿಶ್ವಶಾಂತಿಗಾಗಿ ಭಕ್ತರು ದೇವಿಯ ಮೊರೆ ಹೋಗಿರುವುದು ವಿಶೇಷ ಮಹತ್ವ ಪಡೆದುಕೊಂಡಿದೆ. ಮಂಗಳವಾರ ಗ್ರಾಮದೆಲ್ಲೆಡೆ ಧಾರ್ಮಿಕ ವಾತಾವರಣ ನಿರ್ಮಾಣವಾಗಿದ್ದು, ಸಾವಿರಾರು ಭಕ್ತರು ದೇವಸ್ಥಾನಕ್ಕೆ ಹರಿದುಬಂದು ಸಕಲ ಜೀವ ರಾಶಿಗಳ ಒಳಿತಿಗಾಗಿ ಪ್ರಾರ್ಥಿಸಿದರು.

ಶಾಸಕ ಜಿ.ಎಸ್. ಪಾಟೀಲ ಅವರ ಕುಟುಂಬದ ನೇತೃತ್ವದಲ್ಲಿ ಹೋಮ–ಹವನಗಳು ವೈದಿಕ ವಿಧಿವಿಧಾನಗಳೊಂದಿಗೆ ಅಚ್ಚುಕಟ್ಟಾಗಿ ನೆರವೇರಿದವು. ಇದೇ ವೇಳೆ ಸಂಪ್ರದಾಯಬದ್ಧವಾಗಿ ಕೆರೆ ಸ್ತಂಭ ಕಾರ್ಯವೂ ಜರುಗಿತು. ಎರೆಶಿಗಮ್ಮ ಸನ್ನಿಧಿಯಲ್ಲಿ ನವಗ್ರಹ ಪ್ರತಿಷ್ಠಾಪನೆ ನಡೆಸಿ, ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ದೊರಕಲಿ ಎಂದು ಅಭಿಮಾನಿಗಳು ಹಾಗೂ ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಜಿ.ಎಸ್. ಪಾಟೀಲ ಅವರು, "ಮಧ್ಯ ಪ್ರಾಚ್ಯ ಸೇರಿದಂತೆ ಇಡೀ ವಿಶ್ವ ಶಾಂತಿಯಿಂದ ಬದುಕಬೇಕು ಎಂಬ ಉದ್ದೇಶದಿಂದ ಸವಡಿ ಗ್ರಾಮಸ್ಥರು ನಡೆಸುತ್ತಿರುವ ಪೂಜೆ ಅಭಿನಂದನೀಯ. ಮನುಷ್ಯನು ಸಕಲ ಜೀವಿಗಳ ಒಳಿತನ್ನು ಬಯಸಿದಾಗ ಮಾತ್ರ ಪ್ರಾರ್ಥನೆ ಫಲಪ್ರದವಾಗುತ್ತದೆ," ಎಂದು ಹೇಳಿದರು.

ಸಮಾಜಕ್ಕೆ ಹಾನಿಕಾರಕ ಚಟುವಟಿಕೆಗಳಿಂದ ದೇಶ ಹಾಗೂ ವಿಶ್ವದ ಶಾಂತಿ ಅಸಾಧ್ಯವಾಗುತ್ತದೆ. ಆದ್ದರಿಂದ ಮಾನವಕುಲದ ಒಳಿತಿಗಾಗಿ ಕಾರ್ಯ ನಿರ್ವಹಿಸುವುದು ಅಗತ್ಯವಾಗಿದ್ದು, ಯುವಕರು ಕೆಟ್ಟ ಹವ್ಯಾಸಗಳಿಂದ ದೂರವಿದ್ದು ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಧಾರ್ಮಿಕ ಕಾರ್ಯದಲ್ಲಿ ಕೆಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಐ.ಎಸ್. ಪಾಟೀಲ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ, ಅನ್ನಪೂರ್ಣದೇವಿ ಪಾಟೀಲ, ಶಶಿಕಲಾ ಪಾಟೀಲ, ಅಕ್ಷಯ ಪಾಟೀಲ, ವೀರಣ್ಣ ಶೆಟ್ಟರ, ಶರಣಗೌಡ ಪಾಟೀಲ, ಮಂಜುಳಾ ಹುಲ್ಲಣ್ಣವರ, ಅಪ್ಪು ಗಿರಡ್ಡಿ, ಪರಶುರಾಮ ಅಳಗವಾಡಿ, ಯಚ್ಚರಗೌಡ ಗೋವಿಂದಗೌಡ್ರ, ಅಭಿಷೇಕ ನವಲಗುಂದ, ಬಸವರಾಜ ತಳವಾರ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿದರು.

### ತಾಲೂಕು ಮಟ್ಟದ ವಿಶ್ವ ಆರೋಗ್ಯ ದಿನಾಚರಣೆ

## ಆರೋಗ್ಯವಂತ ವ್ಯಕ್ತಿಯಿಂದ ಆರೋಗ್ಯವಂತ ಸಮಾಜ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯ ಎಂದರೆ ಕೇವಲ ರೋಗರಹಿತವಾಗಿರುವುದಲ್ಲ, ದೈಹಿಕ, ಮಾನಸಿಕ, ಸಾಮಾಜಿಕ, ಬೌದ್ಧಿಕ ಮತ್ತು ಆಧ್ಯಾತ್ಮಿಕ ಸ್ಥಿತಿಗಳನ್ನು ಒಳಗೊಂಡಿರುತ್ತದೆ. ಆರೋಗ್ಯಕರ ಸಮಾಜ ದೇಶದ ಶಕ್ತಿಯಾಗಿದ್ದು, ಆರೋಗ್ಯವಂತ ವ್ಯಕ್ತಿಯಿಂದ ಆರೋಗ್ಯವಂತ ಸಮಾಜ ನಿರ್ಮಾಣ ಸಾಧ್ಯ ಎಂದು ಗದಗ ತಾಲೂಕಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಡಾ. ರಾಜೇಂದ್ರ ಎಸ್. ಗಡಾದ ಹೇಳಿದರು.

ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ, ಗದಗ ನಗರ ಆರೋಗ್ಯ ಕೇಂದ್ರ, ಕೆ. ಎಚ್. ಪಾಟೀಲ್ ವೇದಿಕೆ ವಿಜ್ಞಾನಗಳ ಸಂಸ್ಥೆ ಸಹಯೋಗದಲ್ಲಿ ಎಸ್. ವಿ. ಟಿ. ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ಏರ್ಪಡಿಸಲಾಗಿದ್ದ ತಾಲೂಕ ಮಟ್ಟದ ವಿಶ್ವ ಆರೋಗ್ಯ ದಿನಾಚರಣೆ ಕಾರ್ಯಕ್ರಮದ ಅತಿಥಿ ಉಪನ್ಯಾಸಕರಾಗಿ ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ದೈನಂದಿನ ಕಾರ್ಯಗಳಲ್ಲಿನ ಅತಿಯಾದ ಮಾನಸಿಕ ಒತ್ತಡಗಳಿಂದ ಆಹಾರ, ವಿಹಾರ ಮತ್ತು ವಿಶ್ರಾಂತಿಗಳಿಗೆ ಸಂಬಂಧಿಸಿದಂತೆ ಒಟ್ಟಾರೆಯಾಗಿ ಜೀವನಶೈಲಿಯು ಬದಲಾಗುತ್ತಿದೆ. ಇದರ ಪರಿಣಾಮವಾಗಿ ಭಾರತವು ವಿಶ್ವದ ಮಧುಮೇಹ ಮತ್ತು ಕ್ಯಾನ್ಸರ್ ರೋಗಗಳ ರಾಜಧಾನಿಯಾಗಿರುವುದು ಕಳವಳಕಾರಿಯಾದ ಸಂಗತಿ ಆಗಿದೆ. ಪ್ರತಿಯೊಬ್ಬ ಮನುಷ್ಯನಿಗೂ ಸದೃಢ ಆರೋಗ್ಯ ಎಂಬುದು ಮೂಲಭೂತ ಹಕ್ಕು. ಉತ್ತಮ ಆರೋಗ್ಯ ಎಲ್ಲರೂ ಕನಸು ಕಾಣುವ ವಿಷಯ. ಆದರೆ ಎಲ್ಲರೂ ಉತ್ತಮ ಆರೋಗ್ಯ ಪಡೆಯಲು ಸಾಧ್ಯವಾಗುತ್ತಿಲ್ಲ. ಉತ್ತಮ ಆರೋಗ್ಯದ ಮಹತ್ವ ತಿಳಿಸಲು ಮತ್ತು ಎಲ್ಲರಿಗೂ ಆರೋಗ್ಯ ಸೇವೆ ಲಭ್ಯವಾಗುವಂತೆ ಅರಿವು ಮೂಡಿಸುವುದೇ ವಿಶ್ವ ಆರೋಗ್ಯ ದಿನಾಚರಣೆಯ ಉದ್ದೇಶವಾಗಿದೆ ಎಂದರು. ಅತಿಥಿಗಳಾಗಿ ಆಗಮಿಸಿದ್ದ ಕೆ. ಎಚ್. ಪಾಟೀಲ್ ವೇದಿಕೆಯ ವಿಜ್ಞಾನಗಳ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕರಾದ ಡಾ. ವಸುಂಧರಾ ಗಾಯಕ್‌ವಾಡ್ ಮಾತನಾಡಿ, ಅಭಿವೃದ್ಧಿ, ವಿಜ್ಞಾನ, ತಂತ್ರಜ್ಞಾನದ ಬೆಳವಣಿಗೆಗಳು ಜನರು ಜೀವಿಸುವ ಸರಾಸರಿ ವಯಸ್ಸು ಹೆಚ್ಚಿಸತೊಡಗಿವೆ. ಆರೋಗ್ಯ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಿ, ದೀರ್ಘಕಾಲ ಉತ್ತಮ ಆರೋಗ್ಯದ ಬದುಕು ನಡೆಸಲು ನಾವು ಇಂದು ಗಮನಹರಿಸಬೇಕಾಗಿದೆ ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಶಿವಕುಮಾರ ಕಾತರಿಕಿಯವರು ಮಾತನಾಡಿ, ಇಂದು ಕಾಲ ಕೆಟ್ಟಿಲ್ಲ. ನಾವು ನಮ್ಮ ಜೀವನ ಶೈಲಿ ಬದಲಾವಣೆ ಮಾಡಿಕೊಂಡು ನಮ್ಮ ಆರೋಗ್ಯವನ್ನು ನಾವೇ ಕೆಡಿಸಿಕೊಳ್ಳುತ್ತಿದ್ದೇವೆ. ಉತ್ತಮ ಹವ್ಯಾಸ, ಆಹಾರ, ವಿಹಾರ ಹೊಂದಿದಲ್ಲಿ ಸದೃಢ ಆರೋಗ್ಯ ಎಲ್ಲರೂ ಪಡೆಯಬಹುದಾಗಿದೆ ಎಂದರು.

ಈ ಕಾರ್ಯಕ್ರಮದಲ್ಲಿ ಎಸ್. ವಿ. ಟಿ. ಪ್ಯಾರಾಮೆಡಿಕಲ್ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ಕೆ. ಎಚ್. ಪಾಟೀಲ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೇದಿಕೆಯ ವಿದ್ಯಾರ್ಥಿಗಳು ಮತ್ತು ಎಸ್. ವಿ. ಟಿ. ಪ್ಯಾರಾಮೆಡಿಕಲ್ ಕಾಲೇಜಿನ ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು.

## ಬಿಜೆಪಿ–ಆರ್‌ಎಸ್‌ಎಸ್ ವಿರುದ್ಧ ಹೇಳಿಕೆ ಖಂಡನೀಯ



■ವಿಜಯಸಾಕ್ಷಿ ಸುದ್ದಿ, ಗದಗ

ಬಿಜೆಪಿ ಹಾಗೂ ಆರ್‌ಎಸ್‌ಎಸ್ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿರುವ ಆರೋಪದ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕೂಡಲೇ ಬಂಧಿಸಬೇಕು ಎಂದು ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಬಿಡುಗಡೆ ಮಾಡಿದ ಅವರು, ಚುನಾವಣಾ ಭಾಷಣದ ವೇಳೆ ಖರ್ಗೆ ನೀಡಿದ ಹೇಳಿಕೆ ಪ್ರಚೋದನಾತ್ಮಕವಾಗಿದ್ದು, ಸಮಾಜದಲ್ಲಿ ಉದ್ರಿಕ್ತತೆ ಸೃಷ್ಟಿಸುವಂತಿದೆ ಎಂದು ಆರೋಪಿಸಿದರು.

ಇಂತಹ ಹೇಳಿಕೆಗಳು ಕೋಮು ಗಲಭೆಗೆ ಕಾರಣವಾಗುವ ಸಾಧ್ಯತೆ ಇರುವುದರಿಂದ, ದೇಶದ ಏಕತೆ ಮತ್ತು ಶಾಂತಿಗೆ ಧಕ್ಕೆಯಾಗುತ್ತದೆ ಎಂದು ಅವರು ಹೇಳಿದರು.

ದೇಶದ್ರೋಹಿ ಮತ್ತು ಮೂಲಭೂತವಾದಿ ಶಕ್ತಿಗಳಿಗೆ ಬೆಂಬಲ ಸೂಚಿಸುವ ರೀತಿಯ ಮಾತುಗಳನ್ನು ಆಡಿರುವ ಹಿನ್ನೆಲೆಯಲ್ಲಿ, ಖರ್ಗೆ ವಿರುದ್ಧ ಕಾನೂನು ಕ್ರಮ ಕೈಗೊಂಡು ಅವರನ್ನು ಬಂಧಿಸಬೇಕು ಎಂದು ರಾಜು ಕುರುಡಗಿ ಒತ್ತಾಯಿಸಿದರು.



**ಗದಗ:** ಗಂಗಿಮಡಿಯ ಅಂಗನವಾಡಿ ಕೇಂದ್ರಕ್ಕೆ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮದ್ ಭೇಟಿ ನೀಡಿದರು. ಈ ವೇಳೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ರಾಧಾ ಮಣ್ಣೂರ, ಮುಕ್ತಾರ ಮೌಲ್ವಿ, ಹುಯಿಲಗೋಳ ಹಾಗೂ ಮುಜಾಬುಲ್ಲಾ ಜಾಫರ್ ಉಪಸ್ಥಿತರಿದ್ದರು.



ಗದಗ: ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಯಲ್ಲಿ ಅಲ್ಪಸಂಖ್ಯಾತರ ಕುಂದುಕೊರತೆ ವಿಚಾರಣೆ ಹಾಗೂ ಮಹಿಳೆಯರ ಸಾಕ್ಷರತಾ ಜಾಗೃತಿ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಯು. ನಿಸಾರ್ ಅಹಮದ್ ಅಹವಾಲು ಸ್ವೀಕರಿಸಿದರು. ಈ ವೇಳೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ ಬಿದರಿ, ವಕ್ಫ್ ಬೋರ್ಡಿನ ತೌಸಿಫ್ ಮಕಾನದಾರ, ಮುಜಾಬುಲ್ಲಾ ಜಾಫರ್ ಮತ್ತಿತರರು ಉಪಸ್ಥಿತರಿದ್ದರು.

## ನಾಳೆ ರೋಣದಲ್ಲಿ ಶ್ರಮಿಕ ವಸತಿ ಶಾಲಾ ಕಟ್ಟಡಕ್ಕೆ ಶಂಕುಸ್ಥಾಪನೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ ಸಹಯೋಗದಲ್ಲಿ ರೋಣ ಪಟ್ಟಣದಲ್ಲಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗಾಗಿ ಶ್ರಮಿಕ ವಸತಿ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿಗೆ ಎಪ್ರಿಲ್ 10ರಂದು ಬೆಳಿಗ್ಗೆ 10.30ಕ್ಕೆ ಶಂಕುಸ್ಥಾಪನೆ ನೆರವೇರಲಿದೆ.

ಪಟ್ಟಣದ ರಾಜೀವ್ ಗಾಂಧಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಆವರಣದಲ್ಲಿ ನಡೆಯುವ ಈ ಕಾರ್ಯಕ್ರಮಕ್ಕೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕಾರ್ಮಿಕ ಸಚಿವರು ಮತ್ತು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್. ಲಾಡ್ ವಿಶೇಷವಾಗಿ ಉಪಸ್ಥಿತರಿರುವರು.

ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರು ಜಿ.ಎಸ್. ಪಾಟೀಲ ಕಾರ್ಯಕ್ರಮಕ್ಕೆ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಡಿ.ಆರ್. ಪಾಟೀಲ, ಸಿ.ಸಿ. ಪಾಟೀಲ, ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ್ ಹಾಗೂ ಮಿಥುನ್ ಜಿ. ಪಾಟೀಲ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ., ಕಾರ್ಮಿಕ ಇಲಾಖೆ ಕಾರ್ಯದರ್ಶಿ ಸಲ್ಮಾ ಕೆ. ಫಾಹಿಂ, ಕಾರ್ಮಿಕ ಆಯುಕ್ತ ಡಾ. ಎಚ್.ಎನ್. ಗೋಪಾಲಕೃಷ್ಣ ಹಾಗೂ ರವಿ ಡಿ. ಚೆನ್ನಣ್ಣವರ್ ಭಾಗವಹಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಿ ಎನ್ ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಸೇರಿದಂತೆ ವಿವಿಧ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

## ದೇವಾಲಯಗಳಲ್ಲಿ ಪ್ರೀ–ವೆಡ್ಡಿಂಗ್ ಶೂಟಿಂಗ್ ನಿಷೇಧಕ್ಕೆ ಒತ್ತಾಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕದ ದೇವಸ್ಥಾನಗಳು ಧಾರ್ಮಿಕ ನಂಬಿಕೆ, ಸಂಸ್ಕೃತಿ ಹಾಗೂ ಆಧ್ಯಾತ್ಮಿಕ ಪರಂಪರೆಯ ಪ್ರತೀಕಗಳಾಗಿದ್ದು, ಇಂತಹ ಪವಿತ್ರ ಕ್ಷೇತ್ರಗಳಲ್ಲಿ ಪ್ರೀ–ವೆಡ್ಡಿಂಗ್ ಶೂಟಿಂಗ್‌ಗಳನ್ನು ನಿಷೇಧಿಸುವಂತೆ ಕಾನೂನು ರೂಪಿಸಬೇಕೆಂದು ಕರ್ನಾಟಕ ಮಂದಿರ ಮಹಾಸಂಘದ ಸದಸ್ಯರಾದ ಶಿವಶಂಕರ ಬ್ಯಾಡಗಿ ಹಾಗೂ ಅನಿಲಕುಮಾರ ಮುಳಗುಂದ ಆಗ್ರಹಿಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿಯಲ್ಲಿ ತಹಸೀಲ್ದಾರ್ ಧನಂಜಯ ಎಂ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಇತ್ತೀಚೆಗೆ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ಬೆಟ್ಟದ ಬೈರವೇಶ್ವರ ದೇವಸ್ಥಾನದ ಒಳಭಾಗದಲ್ಲಿ ಚಪ್ಪಲಿ ಧರಿಸಿ ಅಸಭ್ಯ ರೀತಿಯಲ್ಲಿ ಪ್ರೀ–ವೆಡ್ಡಿಂಗ್ ಫೋಟೋಶೂಟಿಂಗ್ ನಡೆಸಿದ ಘಟನೆ ನಡೆದಿರುವುದು ಖಂಡನೀಯವಾಗಿದೆ ಎಂದು ಹೇಳಿದರು.

ಈ ಕುರಿತು ಆಕ್ಷೇಪ ವ್ಯಕ್ತಪಡಿಸಿದ ಅರ್ಚಕರು ಹಾಗೂ ಭಕ್ತರ ವಿರುದ್ಧ ಅವಾಚ್ಯ ಶಬ್ದ ಬಳಕೆ ಮತ್ತು ಅಸಭ್ಯ ವರ್ತನೆ ನಡೆದಿರುವುದು ವಿಷಾದನೀಯವಾಗಿದೆ ಎಂದು ಅವರು ಹೇಳಿದರು.

ಇಂತಹ ಘಟನೆಗಳು ರಾಜ್ಯದ ಅನೇಕ ದೇವಸ್ಥಾನಗಳಲ್ಲಿ ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿಯಾಗಿದ್ದು, ದೇವಸ್ಥಾನಗಳ ಪ್ರಾಂಗಣದಲ್ಲಿ ಅನುಮತಿ ಇಲ್ಲದೆ ಅಸಭ್ಯ ಉಡುಪುಗಳಲ್ಲಿ ಪ್ರೀ–ವೆಡ್ಡಿಂಗ್ ಶೂಟಿಂಗ್, ರೀಲ್ಸ್ ನಿರ್ಮಾಣ ಇತ್ಯಾದಿ ಚಟುವಟಿಕೆಗಳು ನಡೆಯುತ್ತಿರುವುದು ಪಾವಿತ್ರ್ಯಕ್ಕೆ ಧಕ್ಕೆ ತರುತ್ತಿದೆ ಎಂದು ಹೇಳಿದರು.

ದೇವಾಲಯಗಳನ್ನು ವೈಯಕ್ತಿಕ ಪ್ರಚಾರ ಮತ್ತು ಸಾಮಾಜಿಕ ಜಾಲತಾಣಗಳಿಗಾಗಿ ಬಳಸುವುದು ಧಾರ್ಮಿಕ ಸ್ಥಳಗಳ ಗೌರವಕ್ಕೆ ಧಕ್ಕೆ ತರುವುದಲ್ಲದೆ, ಭಕ್ತರ ಧಾರ್ಮಿಕ ಭಾವನೆಗೂ ನೋವುಂಟು ಮಾಡುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಂಜುನಾಥ ಸುಣ್ಣದಮನಿ, ಕಾವೇರಿ ಲಮಾಣಿ, ಪವಿತ್ರಾ ಲಮಾಣಿ, ಶಿವಪ್ಪ ಮಂಟೂರ, ಮಂಜುನಾಥ ಹರಿಜನ, ಗಂಗಾಧರ ಗೋಡಿ, ಎಲ್.ಎಫ್. ಗೋಣೆಪ್ಪನವರ, ಶೋಭಾ ಇಟಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿಯ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್

## ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಸಾಂಸ್ಕೃತಿಕ ನಾಯಕ ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿಯನ್ನು ಎಪ್ರಿಲ್ 20 ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ಆಚರಿಸಲು ಕ್ರಮವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ಕುರಿತು ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಾಲೂಕು ಮಟ್ಟದಲ್ಲಿ ತಹಸೀಲ್ದಾರ್ ಅವರ ಅಧ್ಯಕ್ಷತೆಯಲ್ಲಿ ಜಯಂತಿಯ ಆಚರಣೆಗೆ ಕ್ರಮ ವಹಿಸಬೇಕು. ಜಯಂತಿ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ ಹಾಗೂ ಸಮಾಜದ ಹಿರಿಯರಿಗೆ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಬಸವೇಶ್ವರರ ಕುರಿತು ಆಳವಾಗಿ ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಜಗಜ್ಯೋತಿ ಶ್ರೀ ಬಸವೇಶ್ವರ ಜಯಂತಿ ವಿಚಾರಧಾರೆಗಳು ಸರ್ವರಿಗೂ ತಲುಪುವ ಕಾರ್ಯವಾಗಬೇಕು. ವಚನಗಳ ಮೂಲಕ ಸಮಾಜದ ಕಲ್ಯಾಣಕ್ಕಾಗಿ ಶ್ರಮಿಸಿದ ಜಗಜ್ಯೋತಿ ಬಸವೇಶ್ವರರ ತತ್ವಾದರ್ಶಗಳನ್ನು ಎಲ್ಲರಿಗೂ ತಿಳಿಸುವ ಕೆಲಸವಾಗಬೇಕು. ಈ ನಿಟ್ಟಿನಲ್ಲಿ ವಿವಿಧ ಇಲಾಖೆಗಳೊಂದಿಗೆ ಸಮಾಜದ ಹಿರಿಯರು, ಗಣ್ಯರು, ವಿವಿಧ ಸಂಘಟನೆಗಳು ಕೈಜೋಡಿಸಿ ಜಯಂತಿಯ ಯಶಸ್ವಿಗೆ ಕಾರಣರಾಗಬೇಕು ಎಂದು ಮನವಿ ಮಾಡಿದರು. ಸಭೆಯಲ್ಲಿ ತಾಲೂಕು ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ಬಳ್ಳಾರಿ ಸೇರಿದಂತೆ ಸಮಾಜದ ಮುಖ್ಯಸ್ಥರು, ಗಣ್ಯರು, ಹಿರಿಯರು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka